ಯೋಹಾನನು *1:1, 3-5, 9-10, 14 (IRV)*

ಆ ವಾಕ್ಯವು ದೇವರಾಗಿತ್ತು… ಆತನಲ್ಲಿ ಜೀವವಿತ್ತು. ಆ ಜೀವವು ಮನುಷ್ಯರಿಗೆ ಬೆಳಕಾಗಿತ್ತು… ಆ ವಾಕ್ಯವೆಂಬುವವನು ಮನುಷ್ಯನಾಗಿ ನಮ್ಮ ಮಧ್ಯದಲ್ಲಿ ವಾಸಮಾಡಿದನು

ಆದಿಯಲ್ಲಿ ವಾಕ್ಯವಿತ್ತು; ಆ ವಾಕ್ಯವು ದೇವರೊಂದಿಗಿತ್ತು; ಆ ವಾಕ್ಯವು ದೇವರಾಗಿತ್ತು. … ಸಮಸ್ತವೂ ಆತನ ಮೂಲಕವಾಗಿ ಸೃಷ್ಟಿಯಾಯಿತು. ಸೃಷ್ಟಿಯಾದ ಎಲ್ಲವುಗಳಲ್ಲಿ ಆತನಿಲ್ಲದೆ ಒಂದಾದರೂ ಸೃಷ್ಟಿಯಾಗಲಿಲ್ಲ. ಆತನಲ್ಲಿ ಜೀವವಿತ್ತು. ಆ ಜೀವವು ಮನುಷ್ಯರಿಗೆ ಬೆಳಕಾಗಿತ್ತು. ಆ ಬೆಳಕು ಕತ್ತಲಲ್ಲಿ ಪ್ರಕಾಶಿಸುತ್ತದೆ. ಕತ್ತಲು ಆ ಬೆಳಕನ್ನು ಮುಸುಕಲಿಲ್ಲ. … ನಿಜವಾದ ಬೆಳಕು ಲೋಕಕ್ಕೆ ಬರುವುದಾಗಿತ್ತು; ಆ ಬೆಳಕೇ ಪ್ರತಿ ಮನುಷ್ಯನಿಗೂ ಬೆಳಕನ್ನು ಕೊಡುವಂಥದು. ಆತನು ಲೋಕದಲ್ಲಿ ಇದ್ದನು ಮತ್ತು ಲೋಕವು ಆತನ ಮೂಲಕ ಉಂಟಾಯಿತು, ಆದರೂ ಲೋಕವು ಆತನನ್ನು ಅರಿತುಕೊಳ್ಳಲಿಲ್ಲ. … ಆ ವಾಕ್ಯವೆಂಬುವವನು ಮನುಷ್ಯನಾಗಿ ನಮ್ಮ ಮಧ್ಯದಲ್ಲಿ ವಾಸಮಾಡಿದನು. ನಾವು ಆತನ ಮಹಿಮೆಯನ್ನು ನೋಡಿದೆವು. ಆ ಮಹಿಮೆಯು ತಂದೆಯ ಬಳಿಯಿಂದ ಬಂದ ಒಬ್ಬನೇ ಮಗನಿಗೆ ಇರತಕ್ಕ ಮಹಿಮೆ. ಆತನು ಕೃಪೆಯಿಂದಲೂ, ಸತ್ಯದಿಂದಲೂ ತುಂಬಿದವನಾಗಿದ್ದನು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಯೋಹಾನನು 3:18-21 (IRV)

ಅವರು ಬೆಳಕಿಗಿಂತ ಕತ್ತಲೆಯನ್ನೇ ಪ್ರೀತಿಸಿದರು... ಸತ್ಯವನ್ನು ಅನುಸರಿಸಿ ನಡೆಯುವವನು ತಾನು ದೇವರಿಂದ ನಡಿಸಿಕೊಂಡು ಬಂದವನಾಗಿ ತನ್ನ ಕೃತ್ಯಗಳನ್ನು ಪ್ರಕಟಪಡಿಸುವುದಕ್ಕಾಗಿ ಬೆಳಕಿಗೆ ಬರುತ್ತಾನೆ

ಆತನನ್ನು ನಂಬುವವನಿಗೆ ನ್ಯಾಯತೀರ್ಪು ಆಗುವುದಿಲ್ಲ, ಆದರೆ ನಂಬದವನಿಗೆ ಆಗಲೇ ತೀರ್ಪಾಯಿತು. ಏಕೆಂದರೆ, ಅವನು ದೇವರ ಒಬ್ಬನೇ ಮಗನ ಹೆಸರಿನ ಮೇಲೆ ನಂಬಿಕೆ ಇಡಲಿಲ್ಲ. ಆ ತೀರ್ಪು ಏನೆಂದರೆ ಬೆಳಕು ಲೋಕಕ್ಕೆ ಬಂದಿದ್ದರೂ ಮನುಷ್ಯರ ಕೃತ್ಯಗಳು ಕೆಟ್ಟವುಗಳಾಗಿರುವುದರಿಂದ ಅವರು ಬೆಳಕಿಗಿಂತ ಕತ್ತಲೆಯನ್ನೇ ಪ್ರೀತಿಸಿದರು. ಕೆಟ್ಟದ್ದನ್ನು ಮಾಡುವವರು ತಮ್ಮ ದುಷ್ಕೃತ್ಯಗಳು ಬಹಿರಂಗವಾಗಬಾರದೆಂದು ಬೆಳಕಿಗೆ ಬರುವುದಿಲ್ಲ ಮತ್ತು ಬೆಳಕನ್ನು ದ್ವೇಷಿಸುತ್ತಾರೆ. ಆದರೆ ಸತ್ಯವನ್ನು ಅನುಸರಿಸಿ ನಡೆಯುವವನು ತಾನು ದೇವರಿಂದ ನಡಿಸಿಕೊಂಡು ಬಂದವನಾಗಿ ತನ್ನ ಕೃತ್ಯಗಳನ್ನು ಪ್ರಕಟಪಡಿಸುವುದಕ್ಕಾಗಿ ಬೆಳಕಿಗೆ ಬರುತ್ತಾನೆ."

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಯೋಹಾನನು *8:12, 24, 31-32, 34, 36 (IRV)*

ನೀವು ನನ್ನ ವಾಕ್ಯದಲ್ಲಿ ನೆಲೆಗೊಂಡಿರುವುದಾದರೆ… ಸತ್ಯವು ನಿಮ್ಮನ್ನು ಬಿಡುಗಡೆ ಮಾಡುವುದು… ಪಾಪ ಮಾಡುವವರೆಲ್ಲರು ಪಾಪಕ್ಕೆ ದಾಸರಾಗಿದ್ದಾರೆ… ಮಗನು ನಿಮ್ಮನ್ನು ಬಿಡುಗಡೆ ಮಾಡಿದರೆ, ನಿಜವಾಗಿಯೂ ನಿಮಗೆ ಬಿಡುಗಡೆಯಾಗುವುದು

ಯೇಸು ಪುನಃ ಜನರೊಂದಿಗೆ ಮಾತನಾಡುತ್ತಾ, “ನಾನೇ ಲೋಕದ ಬೆಳಕಾಗಿದ್ದೇನೆ. ನನ್ನನ್ನು ಹಿಂಬಾಲಿಸುವವನು ಎಂದಿಗೂ ಕತ್ತಲೆಯಲ್ಲಿ ನಡೆಯುವುದಿಲ್ಲ, ಆದರೆ ಅವನು ಜೀವದ ಬೆಳಕನ್ನು ಹೊಂದಿರುವವನು” ಎಂದು ಹೇಳಿದನು. … ಆದುದರಿಂದ ನೀವು ನಿಮ್ಮ ಪಾಪಗಳಲ್ಲಿಯೇ ಸಾಯುವಿರೆಂದು ನಿಮಗೆ ನಾನು ಹೇಳಿದೆನು. ನೀವು ನನ್ನನ್ನು ಯಾರೆಂದು ನಂಬದೆ ಹೋದರೆ ನಿಮ್ಮ ಪಾಪಗಳಲ್ಲಿಯೇ ಸಾಯುವಿರಿ” ಎಂದು ಹೇಳಿದನು. … ಆಗ ಯೇಸು ತನ್ನನ್ನು ನಂಬಿದ ಯೆಹೂದ್ಯರಿಗೆ, “ನೀವು ನನ್ನ ವಾಕ್ಯದಲ್ಲಿ ನೆಲೆಗೊಂಡಿರುವುದಾದರೆ, ನಿಜವಾಗಿಯೂ ನೀವು ನನ್ನ ಶಿಷ್ಯರಾಗಿರುವಿರಿ. ಇದಲ್ಲದೆ ನೀವು ಸತ್ಯವನ್ನು ತಿಳಿದುಕೊಳ್ಳುವಿರಿ ಮತ್ತು ಸತ್ಯವು ನಿಮ್ಮನ್ನು ಬಿಡುಗಡೆ ಮಾಡುವುದು” ಎಂದು ಹೇಳಿದನು. … ಅದಕ್ಕೆ ಯೇಸು, “ನಿಮಗೆ ನಿಜನಿಜವಾಗಿ ಹೇಳುತ್ತೇನೆ, ಪಾಪ ಮಾಡುವವರೆಲ್ಲರು ಪಾಪಕ್ಕೆ ದಾಸರಾಗಿದ್ದಾರೆ. … ಆದುದರಿಂದ ಮಗನು ನಿಮ್ಮನ್ನು ಬಿಡುಗಡೆ ಮಾಡಿದರೆ, ನಿಜವಾಗಿಯೂ ನಿಮಗೆ ಬಿಡುಗಡೆಯಾಗುವುದು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಯೋಹಾನನು *15:7, 9, 11-14, 16 (IRV)*

ನನ್ನಲ್ಲಿರುವ ಆನಂದವು ನಿಮ್ಮಲ್ಲಿಯೂ ಇರಬೇಕೆಂದೂ… ನಾನು ನಿಮ್ಮನ್ನು ಪ್ರೀತಿಸಿದ ಹಾಗೆಯೇ ನೀವು ಒಬ್ಬರನ್ನೊಬ್ಬರು ಪ್ರೀತಿಸಬೇಕೆಂಬುದೇ ನನ್ನ ಆಜ್ಞೆಯಾಗಿದೆ… ತನ್ನ ಪ್ರಾಣವನ್ನೇ ಸ್ನೇಹಿತರಿಗೋಸ್ಕರ ಕೊಡುವ ಪ್ರೀತಿಗಿಂತ ಹೆಚ್ಚಿನ ಪ್ರೀತಿಯು ಯಾವುದೂ ಇಲ್ಲ

ನೀವು ನನ್ನಲ್ಲಿಯೂ ನನ್ನ ವಾಕ್ಯಗಳು ನಿಮ್ಮಲ್ಲಿಯೂ ನೆಲೆಗೊಂಡಿದ್ದರೆ
ನೀವು ಏನಾದರೂ ಬೇಡಿಕೊಳ್ಳಿರಿ ಅದು ನಿಮಗೆ ದೊರೆಯುವುದು. …
“ತಂದೆ ನನ್ನನ್ನು ಪ್ರೀತಿಸಿದ ಹಾಗೆಯೇ ನಾನೂ ನಿಮ್ಮನ್ನು ಪ್ರೀತಿಸಿದ್ದೇನೆ.
ನೀವು ನನ್ನ ಪ್ರೀತಿಯಲ್ಲಿ ನೆಲೆಗೊಂಡಿರಿ. … ನನ್ನಲ್ಲಿರುವ ಆನಂದವು
ನಿಮ್ಮಲ್ಲಿಯೂ ಇರಬೇಕೆಂದೂ, ಆ ನಿಮ್ಮ ಆನಂದವು
ಪರಿಪೂರ್ಣವಾಗಬೇಕೆಂದೂ ನಾನು ಇವುಗಳನ್ನು ನಿಮಗೆ ಹೇಳಿದ್ದೇನೆ.
ನಾನು ನಿಮ್ಮನ್ನು ಪ್ರೀತಿಸಿದ ಹಾಗೆಯೇ ನೀವು ಒಬ್ಬರನ್ನೊಬ್ಬರು
ಪ್ರೀತಿಸಬೇಕೆಂಬುದೇ ನನ್ನ ಆಜ್ಞೆಯಾಗಿದೆ. ತನ್ನ ಪ್ರಾಣವನ್ನೇ
ಸ್ನೇಹಿತರಿಗೋಸ್ಕರ ಕೊಡುವ ಪ್ರೀತಿಗಿಂತ ಹೆಚ್ಚಿನ ಪ್ರೀತಿಯು
ಯಾವುದೂ ಇಲ್ಲ. ನಾನು ನಿಮಗೆ ಕೊಟ್ಟ ಆಜ್ಞೆಗಳ ಪ್ರಕಾರ ನೀವು
ನಡೆದರೆ, ನೀವು ನನ್ನ ಸ್ನೇಹಿತರು. … ನೀವು ನನ್ನನ್ನು ಆರಿಸಿಕೊಳ್ಳಲಿಲ್ಲ,
ನಾನು ನಿಮ್ಮನ್ನು ಆರಿಸಿಕೊಂಡಿದ್ದೇನೆ, ನೀವು ಹೊರಟು ಹೋಗಿ
ಫಲಕೊಡಬೇಕೆಂತಲೂ, ಹಾಗೂ ನೀವು ಕೊಡುವ ಫಲವು ಸದಾಕಾಲ
ನಿಲ್ಲುವಂಥದ್ದಾಗಬೇಕಂತಲೂ ನಾನು ನಿಮ್ಮನ್ನು ನೇಮಿಸಿದ್ದೇನೆ.
ಹೀಗಿರಲಾಗಿ ನೀವು ನನ್ನ ಹೆಸರಿನಲ್ಲಿ ತಂದೆಯನ್ನು ಏನೇನು
ಬೇಡಿಕೊಳ್ಳುವಿರೋ, ಅದನ್ನು ಆತನು ನಿಮಗೆ ಕೊಡುವನು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಯೋಹಾನನು *11:25-26, 40-43 (IRV)*

ಜೀವಿಸುವ ಪ್ರತಿಯೊಬ್ಬನು ನನ್ನಲ್ಲಿ ನಂಬಿಕೆಯಿಟ್ಟರೆ, ಅವನು ಎಂದಿಗೂ ಸಾಯುವುದಿಲ್ಲ... ಇದನ್ನು ನೀನು ನಂಬುತ್ತೀಯೋ?

ಯೇಸು ಆಕೆಗೆ, “ನಾನೇ ಪುನರುತ್ಥಾನವೂ ಜೀವವೂ ಆಗಿದ್ದೇನೆ. ನನ್ನಲ್ಲಿ ನಂಬಿಕೆ ಇಡುವವನು ಸತ್ತರೂ ಬದುಕುವನು, ಮತ್ತು ಜೀವಿಸುವ ಪ್ರತಿಯೊಬ್ಬನು ನನ್ನಲ್ಲಿ ನಂಬಿಕೆಯಿಟ್ಟರೆ, ಅವನು ಎಂದಿಗೂ ಸಾಯುವುದಿಲ್ಲ. ಇದನ್ನು ನೀನು ನಂಬುತ್ತೀಯೋ?” ಎಂದು ಕೇಳಿದಕ್ಕೆ, ... ಯೇಸು ಆಕೆಗೆ, “ನೀನು ನಂಬಿದರೆ ದೇವರ ಮಹಿಮೆಯನ್ನು ಕಾಣುವಿ ಎಂದು ನಾನು ನಿನಗೆ ಹೇಳಲಿಲ್ಲವೇ?” ಎಂದು ಉತ್ತರ ಕೊಟ್ಟನು ಆಗ ಅವರು ಕಲ್ಲನ್ನು ತೆಗೆದು ಹಾಕಿದರು. ಯೇಸು ಕಣ್ಣೆತ್ತಿ ಮೇಲಕ್ಕೆ ನೋಡಿ, “ತಂದೆಯೇ ನೀನು ನನಗೆ ಕಿವಿಗೊಟ್ಟಿದ್ದಕ್ಕಾಗಿ ನಿನಗೆ ಕೃತಜ್ಞತೆಯನ್ನು ಸಲ್ಲಿಸುತ್ತೇನೆ. ನೀನು ನನಗೆ ಯಾವಾಗಲೂ ಕಿವಿಗೊಡುತ್ತೀ ಎಂದು ನನಗೆ ತಿಳಿದೇ ಇದೆ. ಆದರೂ ನೀನೇ ನನ್ನನ್ನು ಕಳುಹಿಸಿಕೊಟ್ಟಿರುವಿ ಎಂದು ಸುತ್ತಲೂ ನಿಂತಿರುವ ಈ ಜನರು ನಂಬುವಂತೆ ಅವರಿಗೋಸ್ಕರ ಈ ಮಾತುಗಳನ್ನಾಡಿದ್ದೇನೆ” ಎಂದು ಹೇಳಿದನು. ಆತನು ಹೀಗೆ ಹೇಳಿದ ಮೇಲೆ, “ಲಾಜರನೇ, ಹೊರಗೆ ಬಾ!” ಎಂದು ಗಟ್ಟಿಯಾದ ಸ್ವರದಿಂದ ಕೂಗಿದನು.

Indian Revised Version · CC BY-SA 4.0 · Bridge Connectivity Solutions

ಯೋಹಾನನು *12:23-26 (IRV)*

ತನ್ನ ಪ್ರಾಣವನ್ನು ಪ್ರೀತಿಸುವವನು ಅದನ್ನು ಕಳೆದುಕೊಳ್ಳುವನು... ಯಾರಾದರೂ ನನ್ನ ಸೇವೆಯನ್ನು ಮಾಡುವವನಾದರೆ ನನ್ನನ್ನು ಹಿಂಬಾಲಿಸಲಿ

ಆಗ ಯೇಸು ಅವರಿಗೆ, “ಮನುಷ್ಯಕುಮಾರನು ಮಹಿಮೆ ಹೊಂದುವ ಗಳಿಗೆಯು ಬಂದಿದೆ. ನಾನು ನಿಮಗೆ ನಿಜನಿಜವಾಗಿ ಹೇಳುತ್ತೇನೆ, ಗೋದಿಯ ಕಾಳು ಭೂಮಿಯಲ್ಲಿ ಬಿದ್ದು ಸಾಯದಿದ್ದರೆ ಒಂಟಿಯಾಗಿ ಉಳಿಯುವುದು. ಆದರೆ ಅದು ಸತ್ತರೆ ಬಹಳ ಫಲ ಕೊಡುವುದು ತನ್ನ ಪ್ರಾಣವನ್ನು ಪ್ರೀತಿಸುವವನು ಅದನ್ನು ಕಳೆದುಕೊಳ್ಳುವನು. ಈ ಲೋಕದಲ್ಲಿ ತನ್ನ ಪ್ರಾಣವನ್ನು ಕಳೆದುಕೊಳ್ಳಲು ಹಿಂಜರಿಯದವನು ನಿತ್ಯಜೀವಕ್ಕಾಗಿ ಅದನ್ನು ಕಾಪಾಡಿಕೊಳ್ಳುವನು. ಯಾರಾದರೂ ನನ್ನ ಸೇವೆಯನ್ನು ಮಾಡುವವನಾದರೆ ನನ್ನನ್ನು ಹಿಂಬಾಲಿಸಲಿ, ಮತ್ತು ಎಲ್ಲಿ ನಾನು ಇರುತ್ತೇನೋ ಅಲ್ಲಿ ನನ್ನ ಸೇವಕನೂ ಸಹ ಇರುವನು. ಯಾರಾದರೂ ನನ್ನ ಸೇವೆಯನ್ನು ಮಾಡುವವನಾದರೆ ನನ್ನ ತಂದೆಯು ಅವನನ್ನು ಸನ್ಮಾನಿಸುವನು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಯೋಹಾನನು *14:15, 18-19, 21; 10:27-30 (IRV)*

ನಾನು ನಿಮ್ಮನ್ನು ಅನಾಥರನ್ನಾಗಿ ಬಿಡುವುದಿಲ್ಲ... ನಾನು ಜೀವಿಸುವುದರಿಂದ ನೀವು ಜೀವಿಸುವಿರಿ... ನನ್ನ ಕುರಿಗಳು ನನ್ನ ಸ್ವರಕ್ಕೆ ಕಿವಿಗೊಡುತ್ತವೆ

"ನೀವು ನನ್ನನ್ನು ಪ್ರೀತಿಸುವವರಾದರೆ ನನ್ನ ಆಜ್ಞೆಗಳನ್ನು ಕೈಕೊಂಡು ನಡೆಯುವಿರಿ. … "ನಾನು ನಿಮ್ಮನ್ನು ಅನಾಥರನ್ನಾಗಿ ಬಿಡುವುದಿಲ್ಲ, ನಿಮ್ಮ ಬಳಿಗೆ ಬರುತ್ತೇನೆ. ಇನ್ನು ಸ್ವಲ್ಪ ಕಾಲವಾದ ಮೇಲೆ ಲೋಕವು ನನ್ನನ್ನು ನೋಡುವುದಿಲ್ಲ, ಆದರೆ ನೀವು ನನ್ನನ್ನು ನೋಡುವಿರಿ. ನಾನು ಜೀವಿಸುವುದರಿಂದ ನೀವು ಜೀವಿಸುವಿರಿ. … ನನ್ನ ಆಜ್ಞೆಗಳನ್ನು ಹೊಂದಿ ಅವುಗಳನ್ನು ಕೈಕೊಂಡು ನಡೆಯುವವನೇ ನನ್ನನ್ನು ಪ್ರೀತಿಸುವವನು. ನನ್ನನ್ನು ಪ್ರೀತಿಸುವವನು ನನ್ನ ತಂದೆಗೆ ಪ್ರಿಯನಾಗಿರುವನು. ನಾನೂ ಅವನನ್ನು ಪ್ರೀತಿಸಿ ಅವನಿಗೆ ನನ್ನನ್ನು ಪ್ರಕಟಪಡಿಸಿ ತೋರಿಸುವೆನು" ಎಂದು ಹೇಳಿದನು. … ನನ್ನ ಕುರಿಗಳು ನನ್ನ ಸ್ವರಕ್ಕೆ ಕಿವಿಗೊಡುತ್ತವೆ. ನಾನು ಅವುಗಳನ್ನು ಬಲ್ಲೆನು. ಅವು ನನ್ನನ್ನು ಹಿಂಬಾಲಿಸುತ್ತವೆ. ನಾನು ಅವುಗಳಿಗೆ ನಿತ್ಯಜೀವವನ್ನು ಕೊಡುತ್ತೇನೆ. ಅವು ಎಂದೆಂದಿಗೂ ನಾಶವಾಗುವುದೇ ಇಲ್ಲ. ಅವುಗಳನ್ನು ಯಾರೂ ನನ್ನ ಕೈಯಿಂದ ಕಸಿದುಕೊಳ್ಳಲಾರರು. ಅವುಗಳನ್ನು ನನಗೆ ಕೊಟ್ಟ ನನ್ನ ತಂದೆಯು ಎಲ್ಲರಿಗಿಂತ ಮಹೋನ್ನತನು. ಅವುಗಳನ್ನು ನನ್ನ ತಂದೆಯ ಕೈಯಿಂದ ಯಾರೂ ಕಸಿದುಕೊಳ್ಳಲಾರರು. ನಾನೂ ಮತ್ತು ನನ್ನ ತಂದೆಯೂ ಒಂದಾಗಿದ್ದೇವೆ" ಎಂದನು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಯೋಹಾನನು *16:22, 27, 31-33 (IRV)*

ಲೋಕದಲ್ಲಿ ನಿಮಗೆ ಸಂಕಟಗಳುಂಟು. ಆದರೆ ಧೈರ್ಯವಾಗಿರಿ, ನಾನು ಲೋಕವನ್ನು ಜಯಿಸಿದ್ದೇನೆ

ಹಾಗೆಯೇ, ನಿಮಗೂ ಈಗ ದುಃಖವಿದ್ದರೂ ನಾನು ನಿಮ್ಮನ್ನು ತಿರುಗಿ ನೋಡುವೆನು, ಆಗ ನಿಮ್ಮ ಹೃದಯಕ್ಕೆ ಆನಂದವಾಗುವುದು, ಮತ್ತು ನಿಮ್ಮ ಆನಂದವನ್ನು ಯಾರು ನಿಮ್ಮಿಂದ ತೆಗೆದು ಹಾಕಲು ಸಾಧ್ಯವಿಲ್ಲ. … ನೀವು ನನ್ನನ್ನು ಪ್ರೀತಿಸಿ ನಾನು ತಂದೆಯ ಬಳಿಯಿಂದ ಹೊರಟುಬಂದವನೆಂದು ನಂಬಿದ್ದರಿಂದ ತಂದೆಯು ತಾನೇ ನಿಮ್ಮನ್ನು ಪ್ರೀತಿಸುತ್ತಾನೆ. … ಅದಕ್ಕೆ ಯೇಸು, "ಈಗ ನೀವು ನಂಬುತ್ತೀರಿ. ಇಗೋ, ನಿಮ್ಮಲ್ಲಿ ಪ್ರತಿಯೊಬ್ಬನು ತನ್ನ ಸ್ಥಳಕ್ಕೆ ಚದರಿಹೋಗಿ ನನ್ನನ್ನು ಒಬ್ಬಂಟಿಗನಾಗಿ ಬಿಡುವ ಸಮಯವು ಬರುತ್ತದೆ. ಹೌದು, ಅದು ಈಗಲೇ ಬಂದಿದೆ. ಆದರೂ ನಾನು ಏಕಾಂಗಿಯಲ್ಲ, ಏಕೆಂದರೆ ತಂದೆಯು ನನ್ನ ಸಂಗಡ ಇದ್ದಾನೆ. ನೀವು ನನ್ನಲ್ಲಿದ್ದು ಸಮಾಧಾನವನ್ನು ಹೊಂದಿದವರಾಗಿರಬೇಕೆಂದು ಇದನ್ನೆಲ್ಲಾ ನಿಮ್ಮೊಂದಿಗೆ ಹೇಳಿದ್ದೇನೆ. ಲೋಕದಲ್ಲಿ ನಿಮಗೆ ಸಂಕಟಗಳುಂಟು. ಆದರೆ ಧೈರ್ಯವಾಗಿರಿ, ನಾನು ಲೋಕವನ್ನು ಜಯಿಸಿದ್ದೇನೆ" ಎಂದು ಹೇಳಿದನು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಯೋಹಾನನು *17:17-21, 26 (IRV)*

ನೀನು ಸತ್ಯದಿಂದ ಇವರನ್ನು ಪ್ರತಿಷ್ಠೆಪಡಿಸು, ನಿನ್ನ ವಾಕ್ಯವೇ ಸತ್ಯ.. ನೀನು ನನ್ನನ್ನು ಪ್ರೀತಿಸಿದಂಥ ಪ್ರೀತಿಯು ಇವರಲ್ಲಿ ಇರಬೇಕೆಂತಲೂ ಮತ್ತು ನಾನೂ ಅವರಲ್ಲಿ ಇರಬೇಕೆಂದೂ

ನೀನು ಸತ್ಯದಿಂದ ಇವರನ್ನು ಪ್ರತಿಷ್ಠೆಪಡಿಸು, ನಿನ್ನ ವಾಕ್ಯವೇ ಸತ್ಯ
ನೀನು ನನ್ನನ್ನು ಲೋಕಕ್ಕೆ ಕಳುಹಿಸಿದಂತೆಯೇ, ನಾನು ಸಹ
ಇವರನ್ನು ಲೋಕಕ್ಕೆ ಕಳುಹಿಸಿದ್ದೇನೆ. ಇವರು ನಿಜವಾಗಿ
ಪ್ರತಿಷ್ಠಿರಾಗಬೇಕೆಂದು, ನನ್ನನ್ನು ನಾನೇ ಇವರಿಗೋಸ್ಕರ
ಪ್ರತಿಷ್ಠಿಸಿಕೊಂಡಿದ್ದೇನೆ. “ಆದರೆ ಇವರಿಗೋಸ್ಕರ ಮಾತ್ರವಲ್ಲದೆ
ಇವರ ವಾಕ್ಯದಿಂದ ನನ್ನನ್ನು ನಂಬುವವರಿಗೋಸ್ಕರವಾಗಿಯೂ
ನಿನ್ನನ್ನು ಬೇಡಿಕೊಳ್ಳುತ್ತೇನೆ. ತಂದೆಯೇ, ನೀನು ನನ್ನಲ್ಲಿಯೂ
ನಾನು ನಿನ್ನಲ್ಲಿಯೂ ಇರುವ ಹಾಗೆಯೇ ಅವರು ಸಹ
ಒಂದಾಗಿರಬೇಕೆಂತಲೂ ಬೇಡಿಕೊಳ್ಳುತ್ತೇನೆ. ನೀನು ನನ್ನನ್ನು
ಕಳುಹಿಸಿದ್ದೀ ಎಂದು ಲೋಕವು ನಂಬುವುದಕ್ಕಾಗಿ, ಅವರೆಲ್ಲರೂ
ನಮ್ಮಲ್ಲಿ ಒಂದಾಗಿರಲಿ ಎಂದು ನಿನ್ನನ್ನು ಕೇಳಿಕೊಳ್ಳುತ್ತೇನೆ. …
ನಾನು ಅವರಿಗೆ ನಿನ್ನ ಹೆಸರನ್ನು ತಿಳಿಸಿದ್ದೇನೆ. ಇನ್ನೂ ತಿಳಿಸುವೆನು.
ಏಕೆಂದರೆ, ನೀನು ನನ್ನನ್ನು ಪ್ರೀತಿಸಿದಂಥ ಪ್ರೀತಿಯು ಇವರಲ್ಲಿ
ಇರಬೇಕೆಂತಲೂ ಮತ್ತು ನಾನೂ ಅವರಲ್ಲಿ ಇರಬೇಕೆಂದೂ
ಪ್ರಾರ್ಥಿಸುತ್ತೇನೆ” ಎಂದನು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಮಾರ್ಕನು 4:38-40 (IRV)

ಯಾಕೆ ಭಯಪಡುತ್ತೀರಿ? ಇನ್ನೂ ನಿಮಗೆ ನಂಬಿಕೆಯಿಲ್ಲವೇ?

ಆದರೆ ಆತನು ದೋಣಿಯ ಹಿಂಭಾಗದಲ್ಲಿ ತಲೆದಿಂಬನ್ನು ಒರಗಿ ನಿದ್ದೆಮಾಡುತ್ತಿದ್ದನು. ಅವರು ಆತನನ್ನು ಎಬ್ಬಿಸಿ, “ಗುರುವೇ, ನಾವು ಮುಳುಗಿಹೋಗುವುದರಲ್ಲಿ ನಿನಗೆ ಚಿಂತೆಯಿಲ್ಲವೇ” ಎಂದು ಕೇಳಿದರು. ಆತನು ಎದ್ದು ಗಾಳಿಯನ್ನು ಗದರಿಸಿ, ಸಮುದ್ರಕ್ಕೆ “ಶಾಂತವಾಗಿರು, ಮೊರೆಯಬೇಡ” ಎಂದು ಅಪ್ಪಣೆಕೊಡುತ್ತಲೇ ಗಾಳಿ ನಿಂತುಹೋಗಿ ಸಮುದ್ರವು ಶಾಂತವಾಯಿತು. ತರುವಾಯ ಆತನು ಅವರನ್ನು, “ಯಾಕೆ ಭಯಪಡುತ್ತೀರಿ? ಇನ್ನೂ ನಿಮಗೆ ನಂಬಿಕೆಯಿಲ್ಲವೇ?” ಎಂದು ಕೇಳಲು

Indian Revised Version · CC BY-SA 4.0 · Bridge Connectivity Solutions

ಮಾರ್ಕನು *14:36, 38, 61-62 (IRV)*

ಶೋಧನೆಗೆ ಒಳಗಾಗದಂತೆ ಎಚ್ಚರವಾಗಿದ್ದು ಪ್ರಾರ್ಥಿಸಿರಿ… ಆತ್ಮವು ಸಿದ್ಧವಾಗಿದೆ; ಆದರೆ ದೇಹಕ್ಕೆ ಬಲ ಸಾಲದು

“ಅಪ್ಪಾ, ತಂದೆಯೇ, ನಿನಗೆ ಎಲ್ಲವೂ ಸಾಧ್ಯ. ಈ ಪಾನಪಾತ್ರೆಯನ್ನು ನನ್ನಿಂದ ತೆಗೆದುಬಿಡು ಆದರೂ ಇದು ನನ್ನ ಚಿತ್ತದಂತಲ್ಲ ನಿನ್ನ ಚಿತ್ತದಂತೆಯೇ ಆಗಲಿ” ಎಂದನು. … ಶೋಧನೆಗೆ ಒಳಗಾಗದಂತೆ ಎಚ್ಚರವಾಗಿದ್ದು ಪ್ರಾರ್ಥಿಸಿರಿ. ಆತ್ಮವು ಸಿದ್ಧವಾಗಿದೆ; ಆದರೆ ದೇಹಕ್ಕೆ ಬಲ ಸಾಲದು” ಎಂದು ಹೇಳಿದನು. … ಆದರೆ ಯೇಸು ಏನೂ ಉತ್ತರ ಕೊಡದೆ ಮೌನವಾಗಿದ್ದನು. ಪುನಃ ಮಹಾಯಾಜಕನು, “ನೀನು ಕ್ರಿಸ್ತನೋ, ಸ್ತುತಿಗೆ ಪಾತ್ರನಾದ ದೇವರ ಕುಮಾರನೋ?” ಎಂದು ಆತನನ್ನು ಕೇಳಿದನು. ಯೇಸುವು “ಹೌದು ನಾನೇ! “ಇದಲ್ಲದೆ ಮನುಷ್ಯಕುಮಾರನು ಸರ್ವಶಕ್ತನ ಬಲಗಡೆಯಲ್ಲಿ ಆಸೀನನಾಗಿರುವುದನ್ನೂ, ಆಕಾಶದ ಮೇಘಗಳಲ್ಲಿ ಬರುವುದನ್ನೂ ನೀವು ನೋಡುವಿರಿ” ಎಂದನು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

1 ಕೊರಿಂಥದವರಿಗೆ 10:6, 8, 13 (IRV)

ದೇವರು ನಂಬಿಗಸ್ತನು. ನಿಮ್ಮ ಶಕ್ತಿಗೆ ಮೀರುವ ಶೋಧನೆಯನ್ನು ನಿಮಗೆ ಬರಗೊಡಿಸದೆ

ಅವರು ಕೆಟ್ಟ ವಿಷಯಗಳನ್ನು ಮೋಹಿಸದಂತೆ ನಾವು ಮೋಹಿಸುವವರಾಗಬಾರದೆಂಬುದಕ್ಕಾಗಿ ಈ ಸಂಗತಿಗಳು ನಮಗೆ ನಿದರ್ಶನಗಳಾಗಿವೆ. … ಅವರಲ್ಲಿ ಕೆಲವರು ಜಾರತ್ವ ಮಾಡಿ ಒಂದೇ ದಿನದಲ್ಲಿ ಇಪ್ಪತ್ತು ಮೂರು ಸಾವಿರ ಜನರು ಸಾವನ್ನಪ್ಪಿದರು. ಅವರ ಹಾಗೆ ನಾವು ಜಾರತ್ವ ಮಾಡದೆ ಇರೋಣ. … ಮನುಷ್ಯರಿಗೆ ಸಾಧಾರಣವಾಗಿ ಬರುವ ಶೋಧನೆಯೇ ಹೊರತು ಬೇರೆ ಯಾವುದೂ ನಿಮಗೆ ಸಂಭವಿಸಲಿಲ್ಲವಲ್ಲ. ದೇವರು ನಂಬಿಗಸ್ತನು. ನಿಮ್ಮ ಶಕ್ತಿಗೆ ಮೀರುವ ಶೋಧನೆಯನ್ನು ನಿಮಗೆ ಬರಗೊಡಿಸದೆ ನೀವು ಅದನ್ನು ಸಹಿಸುವುದಕ್ಕೆ ಶಕ್ತರಾಗುವಂತೆ ಶೋಧನೆಯಾಗುತ್ತಲೇ ತಪ್ಪಿಸಿಕೊಳ್ಳುವ ಮಾರ್ಗವನ್ನು ಸಿದ್ಧಮಾಡುವನು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

1 ಕೊರಿಂಥದವರಿಗೆ 3:1, 3, 16-17 (IRV)

ನಿಮ್ಮಲ್ಲಿ ಹೊಟ್ಟೆಕಿಚ್ಚು ಜಗಳಗಳು ಇರುವಲ್ಲಿ… ನೀವು ದೇವರ ಆಲಯವಾಗಿದ್ದೀರೆಂದೂ ದೇವರ ಆತ್ಮನು ನಿಮ್ಮಲ್ಲಿ ವಾಸಮಾಡುತ್ತಾನೆಂದೂ ನಿಮಗೆ ಗೊತ್ತಿಲ್ಲವೋ?… ದೇವರ ಆಲಯವು ಪವಿತ್ರವಾದದ್ದು

ಆದರೆ ಸಹೋದರರರೇ ನಾನಂತೂ ಆತ್ಮೀಕರೊಂದಿಗೆ ಮಾತನಾಡುವಂತೆ ನಿಮ್ಮ ಸಂಗಡ ಮಾತನಾಡದೆ ಪ್ರಾಪಂಚಿಕರೂ ಕ್ರಿಸ್ತನ ವಿಷಯದಲ್ಲಿ ಎಳೆಗೂಸುಗಳೂ ಆಗಿರುವವರ ಹಾಗೆ ನಿಮ್ಮ ಸಂಗಡ ಮಾತನಾಡಬೇಕಾಯಿತು. … ಯಾಕೆಂದರೆ ನೀವು ಇನ್ನೂ ಪ್ರಾಪಂಚಿಕರಾಗಿದ್ದೀರಿ. ನಿಮ್ಮಲ್ಲಿ ಹೊಟ್ಟೆಕಿಚ್ಚು ಜಗಳಗಳು ಇರುವಲ್ಲಿ, ನೀವು ಪ್ರಾಪಂಚಿಕರಾಗಿದ್ದು ಕೇವಲ ಬೇರೆ ಮನುಷ್ಯರಂತೆ ನಡೆಯುತ್ತೀರಲ್ಲವೆ? … ನೀವು ದೇವರ ಆಲಯವಾಗಿದ್ದೀರೆಂದೂ ದೇವರ ಆತ್ಮನು ನಿಮ್ಮಲ್ಲಿ ವಾಸಮಾಡುತ್ತಾನೆಂದೂ ನಿಮಗೆ ಗೊತ್ತಿಲ್ಲವೋ? ಯಾವನಾದರೂ ದೇವರ ಆಲಯವನ್ನು ನಾಶಪಡಿಸಿದರೆ ದೇವರು ಅವನನ್ನು ನಾಶಪಡಿಸುವನು. ಯಾಕೆಂದರೆ ದೇವರ ಆಲಯವು ಪವಿತ್ರವಾದದ್ದು ಆ ಆಲಯವು ನೀವೇ ಆಗಿದ್ದೀರಿ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

1 ಕೊರಿಂಥದವರಿಗೆ 6:9-13 (IRV)

ನೀವು ಕರ್ತನಾದ ಯೇಸು ಕ್ರಿಸ್ತನ ಹೆಸರಿನಿಂದಲೂ ಮತ್ತು ನಮ್ಮ ದೇವರ ಆತ್ಮದಿಂದಲೂ ತೊಳೆಯಲ್ಪಟ್ಟು, ಶುದ್ಧೀಕರಿಸಲ್ಪಟ್ಟಿದ್ದೀರಿ, ದೇವರಿಂದ ನೀತಿವಂತರೆಂಬ ನಿರ್ಣಯವನ್ನು ಹೊಂದಿದ್ದೀರಿ

ಅನೀತಿವಂತರು ದೇವರ ರಾಜ್ಯಕ್ಕೆ ಬಾಧ್ಯರಾಗುವುದಿಲ್ಲವೆಂಬುದು ನಿಮಗೆ ತಿಳಿಯದೋ? ಸುಳ್ಳನ್ನು ನಂಬಬೇಡಿರಿ. ಜಾರರು, ವಿಗ್ರಹಾರಾಧಕರು, ವ್ಯಭಿಚಾರಿಗಳು, ಪುರುಷಗಾಮಿಗಳು, ಕಳ್ಳರು, ಲೋಭಿಗಳು, ಕುಡುಕರು, ಜಗಳಮಾಡುವವರು, ಸುಲುಕೊಳ್ಳುವವರು ಇವರೊಳಗೆ ಒಬ್ಬರಾದರೂ ದೇವರ ರಾಜ್ಯಕ್ಕೆ ಬಾಧ್ಯರಾಗುವುದಿಲ್ಲ. ನಿಮ್ಮಲ್ಲಿ ಕೆಲವರು ಅಂಥವರಾಗಿದ್ದೀರಿ. ಆದರೆ ನೀವು ಕರ್ತನಾದ ಯೇಸು ಕ್ರಿಸ್ತನ ಹೆಸರಿನಿಂದಲೂ ಮತ್ತು ನಮ್ಮ ದೇವರ ಆತ್ಮದಿಂದಲೂ ತೊಳೆಯಲ್ಪಟ್ಟು, ಶುದ್ಧೀಕರಿಸಲ್ಪಟ್ಟಿದ್ದೀರಿ, ದೇವರಿಂದ ನೀತಿವಂತರೆಂಬ ನಿರ್ಣಯವನ್ನು ಹೊಂದಿದ್ದೀರಿ. “ಎಲ್ಲಾ ಕಾರ್ಯಗಳನ್ನು ಮಾಡುವುದಕ್ಕೆ ನನಗೆ ಹಕ್ಕುಂಟು,” ಆದರೆ ಎಲ್ಲವು ಪ್ರಯೋಜನಕರವಲ್ಲ. “ಎಲ್ಲಾ ಕಾರ್ಯಗಳನ್ನು ಮಾಡುವುದಕ್ಕೆ ನನಗೆ ಹಕ್ಕುವುಂಟು” ಆದರೆ ನಾನು ಯಾವುದಕ್ಕೂ ಅಧೀನನಲ್ಲ. “ಭೋಜನ ಪದಾರ್ಥಗಳು ಹೊಟ್ಟೆಗಾಗಿಯೂ ಮತ್ತು ಹೊಟ್ಟೆಯು ಭೋಜನಪದಾರ್ಥಗಳಿಗಾಗಿಯೂ” ಇವೆ. ದೇವರು ಇವೆರಡನ್ನೂ ನಾಶಮಾಡುವನು. ಆದರೆ ದೇಹವು ಜಾರತ್ವಕೋಸ್ಕರ ಇರುವಂಥದಲ್ಲ. ಕರ್ತನಿಗೋಸ್ಕರ ಇರುವುದಾಗಿದೆ. ಕರ್ತನು ದೇಹಕೋಸ್ಕರ ಒದಗಿಸಿಕೊಡುತ್ತಾನೆ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

2 ಕೊರಿಂಥದವರಿಗೆ 1:3-4, 8-9 (IRV)

ನಮ್ಮ ಕರ್ತನಾದ ಯೇಸು ಕ್ರಿಸ್ತನ ತಂದೆಯೂ ದೇವರೂ ಆಗಿರುವಾತನಿಗೆ ಸ್ತೋತ್ರವಾಗಲಿ… ನಮಗೆ ಸಂಭವಿಸುವ ಎಲ್ಲಾ ಸಂಕಟಗಳಲ್ಲಿ ನಮ್ಮನ್ನು ಸಂತೈಸುವವನಾಗಿದ್ದಾನೆ

ನಮ್ಮ ಕರ್ತನಾದ ಯೇಸು ಕ್ರಿಸ್ತನ ತಂದೆಯೂ ದೇವರೂ ಆಗಿರುವಾತನಿಗೆ ಸ್ತೋತ್ರವಾಗಲಿ. ಆತನು ಕನಿಕರವುಳ್ಳ ತಂದೆಯೂ ಸಕಲ ವಿಧವಾಗಿ ಸಂತೈಸುವ ದೇವರೂ ಆಗಿದ್ದು, ನಮಗೆ ಸಂಭವಿಸುವ ಎಲ್ಲಾ ಸಂಕಟಗಳಲ್ಲಿ ನಮ್ಮನ್ನು ಸಂತೈಸುವವನಾಗಿದ್ದಾನೆ. ಹೀಗೆ ದೇವರಿಂದ ನಮಗಾಗುವ ಆದರಣೆಯ ಮೂಲಕ ನಾವು ನಾನಾ ವಿಧವಾದ ಸಂಕಟಗಳಲ್ಲಿ ಬಿದ್ದಿರುವವರನ್ನು ಸಂತೈಸುವುದಕ್ಕೆ ಶಕ್ತರಾಗುತ್ತೇವೆ. … ಸಹೋದರರೇ, ಆಸ್ಯ ಸೀಮೆಯಲ್ಲಿ ನಾವು ಅನುಭವಿಸಿದ ಕಷ್ಟ-ಸಂಕಟಗಳು ನಿಮಗೆ ತಿಳಿದಿರಲಿ ಎಂದು ನಾನು ಬಯಸುತ್ತೇನೆ. ಅಲ್ಲಿ ನಮ್ಮ ಶಕ್ತಿಗೆ ಮೀರಿದಂಥ ತೊಂದರೆಗಳನ್ನು ಅನುಭವಿಸಿ ನಾವು ಕುಗ್ಗಿಹೋಗಿ ಬದುಕುವ ನಿರೀಕ್ಷೆಯೇ ಇಲ್ಲವಾದವು. ಸಾಯುವುದು ನಿಶ್ಚಯವೆಂದೆನಿಸಿದಾಗ ನಾವು ನಮ್ಮ ಮೇಲೆ ಭರವಸವನ್ನಿಟ್ಟುಕೊಳ್ಳದೆ ಸತ್ತವರನ್ನು ಎಬ್ಬಿಸುವ ದೇವರ ಮೇಲೆಯೇ ಭರವಸವಿಡುವವರಾಗಬೇಕೆಂದು ಇದೆಲ್ಲಾ ಸಂಭವಿಸಿತು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

2 ಕೊರಿಂಥದವರಿಗೆ 4:6-7; 1:12 (IRV)

ನಮ್ಮ ಹೃದಯಗಳಲ್ಲಿ ಪ್ರಕಾಶಿಸಿದನು… ಮಣ್ಣಿನ ಮಡಿಕೆಯಂತಿರುವ ನಮ್ಮಲ್ಲಿ ಈ ನಿಕ್ಷೇಪವನ್ನು ಇಡಲ್ಪಟ್ಟಿರುವುದರಿಂದ ಇಂತಹ ಮಹಾಶಕ್ತಿಯು ದೇವರದೇ ಹೊರತು ನಮ್ಮೊಳಗಿಂದ ಬಂದದ್ದಲ್ಲವೆಂಬುದು ಸ್ಪಷ್ಟವಾಗಿದೆ

ಯಾಕೆಂದರೆ “ಕತ್ತಲೆಯೊಳಗಿನಿಂದ ಬೆಳಕು ಪ್ರಕಾಶಿಸಲಿ” ಎಂದು ಹೇಳಿದ ದೇವರು ತಾನೇ ಯೇಸು ಕ್ರಿಸ್ತನ ಮುಖದಲ್ಲಿ ತೋರುವ ದೇವಮಹಿಮೆಯ ಜ್ಞಾನವೆಂಬ ಪ್ರಕಾಶವು ಅನೇಕರಿಗೆ ಉಂಟಾಗುವುದಕ್ಕಾಗಿ ನಮ್ಮ ಹೃದಯಗಳಲ್ಲಿ ಪ್ರಕಾಶಿಸಿದನು. ಮಣ್ಣಿನ ಮಡಿಕೆಯಂತಿರುವ ನಮ್ಮಲ್ಲಿ ಈ ನಿಕ್ಷೇಪವನ್ನು ಇಡಲ್ಪಟ್ಟಿರುವುದರಿಂದ ಇಂತಹ ಮಹಾಶಕ್ತಿಯು ದೇವರದೇ ಹೊರತು ನಮ್ಮೊಳಗಿಂದ ಬಂದದ್ದಲ್ಲವೆಂಬುದು ಸ್ಪಷ್ಟವಾಗಿದೆ. … ನಾವು ಕೇವಲ ಮನುಷ್ಯಜ್ಞಾನವನ್ನು ಬಳಸದೇ ದೇವರ ಕೃಪೆಯನ್ನು ಆಶ್ರಯಿಸಿ ಪರಿಶುದ್ಧರಾಗಿಯೂ, ಪ್ರಾಮಾಣಿಕರಾಗಿಯೂ ಈ ಲೋಕದಲ್ಲಿ ಮುಖ್ಯವಾಗಿ ನಿಮ್ಮ ವಿಷಯದಲ್ಲಿ ನಡೆದುಕೊಂಡೆವೆಂದು ನಮ್ಮ ಮನಸ್ಸಾಕ್ಷಿ ಹೇಳುತ್ತದೆ. ಇದೇ ನಮಗಿರುವ ಹೆಮ್ಮೆ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಗಲಾತ್ಯದವರಿಗೆ 2:18-21 (IRV)

ನಾನು ಸಹ ಕ್ರಿಸ್ತನೊಂದಿಗೆ ಶಿಲುಬೆಗೆ ಹಾಕಿಸಿಕೊಂಡವನಾಗಿದ್ದೇನೆ… ಈಗ ಶರೀರದಲ್ಲಿರುವ ನಾನು ಜೀವಿಸುವುದು ಹೇಗೆಂದರೆ ದೇವಕುಮಾರನ ಮೇಲಣ ನಂಬಿಕೆಯಿಂದಲೇ… ಆತನು ನನ್ನನ್ನು ಪ್ರೀತಿಸಿ ನನಗಾಗಿ ತನ್ನನ್ನು ಒಪ್ಪಿಸಿಕೊಟ್ಟನು

ನಾನು ಕೆಡವಿದ್ದನ್ನೇ ತಿರುಗಿ ಕಟ್ಟಿದರೆ ನನ್ನನ್ನು ನಾನೇ ಅಪರಾಧಿ ಎಂದು ತೋರಿಸಿಕೊಳ್ಳುತ್ತೇನಲ್ಲಾ. ನಾನಂತೂ ದೇವರಿಗಾಗಿ ಜೀವಿಸುವುದಕ್ಕೋಸ್ಕರ ಧರ್ಮಶಾಸ್ತ್ರದ ಮೂಲಕವಾಗಿ ಧರ್ಮಶಾಸ್ತ್ರದ ಪಾಲಿಗೆ ಸತ್ತವನಾಗಿದ್ದೇನೆ. ನಾನು ಸಹ ಕ್ರಿಸ್ತನೊಂದಿಗೆ ಶಿಲುಬೆಗೆ ಹಾಕಿಸಿಕೊಂಡವನಾಗಿದ್ದೇನೆ, ಇನ್ನು ಜೀವಿಸುವವನು ನಾನಲ್ಲ, ಕ್ರಿಸ್ತನು ನನ್ನಲ್ಲಿ ಜೀವಿಸುತ್ತಾನೆ. ಈಗ ಶರೀರದಲ್ಲಿರುವ ನಾನು ಜೀವಿಸುವುದು ಹೇಗೆಂದರೆ ದೇವಕುಮಾರನ ಮೇಲಣ ನಂಬಿಕೆಯಿಂದಲೇ. ಆತನು ನನ್ನನ್ನು ಪ್ರೀತಿಸಿ ನನಗಾಗಿ ತನ್ನನ್ನು ಒಪ್ಪಿಸಿಕೊಟ್ಟನು. ನಾನು ದೇವರ ಕೃಪೆಯನ್ನು ತಿರಸ್ಕರಿಸುವುದಿಲ್ಲ. ಧರ್ಮಶಾಸ್ತ್ರದ ಮೂಲಕ ನೀತಿವಂತರಾಗಬಹುದಾದರೆ ಕ್ರಿಸ್ತನು ಮರಣಕ್ಕೀಡಾದುದು ನಿರರ್ಥಕವೇ ಸರಿ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಗಲಾತ್ಯದವರಿಗೆ *6:1-2, 7-9 (IRV)*

ಒಬ್ಬರು ಮತ್ತೊಬ್ಬರ ಭಾರವನ್ನು ಹೊತ್ತುಕೊಳ್ಳಲಿ… ದೇವರನ್ನು ಅಪಹಾಸ್ಯ ಮಾಡಲಾಗುವುದಿಲ್ಲ… ಮನುಷ್ಯನು ತಾನು ಏನು ಬಿತ್ತುತ್ತಾನೋ ಅದನ್ನೇ ಕೊಯ್ಯಬೇಕು

ಸಹೋದರರರೇ, ನಿಮ್ಮಲ್ಲಿ ಯಾರಾದರೂ ಯಾವುದಾದರೂ ಪಾಪದಲ್ಲಿ ಸಿಕ್ಕಿಹಾಕಿಕೊಂಡಿದ್ದರೆ ಅಂಥವರನ್ನು ಆತ್ಮಭರಿತರಾದ ನೀವು ಶಾಂತಭಾವದಿಂದ ತಿದ್ದಿ ಸರಿಮಾಡಿರಿ. ನೀವಾದರೂ ಶೋಧನೆಗೆ ಒಳಗಾಗದಂತೆ ನಿಮ್ಮ ವಿಷಯದಲ್ಲಿ ಎಚ್ಚರಿಕೆಯಾಗಿರಿ. <u>ಒಬ್ಬರು ಮತ್ತೊಬ್ಬರ ಭಾರವನ್ನು ಹೊತ್ತುಕೊಳ್ಳಲಿ</u>, ಹೀಗೆ ಕ್ರಿಸ್ತನ ನೀತಿನಿಯಮಗಳನ್ನು ನೆರವೇರಿಸಿರಿ. … ಮೋಸಹೋಗಬೇಡಿರಿ. <u>ದೇವರನ್ನು ಅಪಹಾಸ್ಯ ಮಾಡಲಾಗುವುದಿಲ್ಲ</u>. <u>ಮನುಷ್ಯನು ತಾನು ಏನು ಬಿತ್ತುತ್ತಾನೋ ಅದನ್ನೇ ಕೊಯ್ಯಬೇಕು</u>. ತನ್ನ ಶರೀರಭಾವವನ್ನು ಕುರಿತು ಬಿತ್ತುವವನು ಆ ಭಾವದಿಂದ ನಾಶವನ್ನು ಕೊಯ್ಯುವನು. ಆತ್ಮನ ಕುರಿತಾಗಿ ಬಿತ್ತುವವನು ಆತ್ಮನಿಂದ ನಿತ್ಯಜೀವವನ್ನು ಕೊಯ್ಯುವನು. ಒಳ್ಳೆಯದನ್ನು ಮಾಡುವುದರಲ್ಲಿ ಬೇಸರಗೊಳ್ಳದೇ ಇರೋಣ. ಏಕೆಂದರೆ ಮನಗುಂದದಿದ್ದರೆ ತಕ್ಕ ಸಮಯದಲ್ಲಿ ಬೆಳೆಯನ್ನು ಕೊಯ್ಯುವೆವು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

1 ತಿಮೊಥೆಯನಿಗೆ 4:6-8, 10 (IRV)

ನೀನು ದೇವಭಕ್ತಿಯ ವಿಷಯದಲ್ಲಿ ಸಾಧನೆಮಾಡಿಕೋ… ಜೀವವುಳ್ಳ ದೇವರ ಮೇಲೆ ನಾವು ನಿರೀಕ್ಷೆಯನ್ನಿಟ್ಟುಕೊಂಡವರಾಗಿದ್ದೇವೆ

ಈ ಸಂಗತಿಗಳನ್ನು ಸಹೋದರರಿಗೆ ತಿಳಿಸಿದರೆ, ನೀನು ಅನುಸರಿಸುತ್ತಿರುವ ಕ್ರಿಸ್ತ ನಂಬಿಕೆಯ ಮತ್ತು ಸುಬೋಧನೆಯ ವಾಕ್ಯಗಳಲ್ಲಿ ಅಭ್ಯಾಸಹೊಂದಿದವನಾಗಿ, ಕ್ರಿಸ್ತ ಯೇಸುವಿನ ಒಳ್ಳೆಯ ಸೇವಕನಾಗಿರುವಿ. ಅಜ್ಜಿ ಕಥೆಗಳನ್ನೂ ಪ್ರಾಪಂಚಿಕವಾದ ಆ ಕಥೆಗಳನ್ನೂ ತಳ್ಳಿಬಿಟ್ಟು, ನೀನು ದೇವಭಕ್ತಿಯ ವಿಷಯದಲ್ಲಿ ಸಾಧನೆಮಾಡಿಕೋ. ದೇಹಸಾಧನೆಯು ಸ್ವಲ್ಪಮಟ್ಟಿಗೆ ಪ್ರಯೋಜನವಾಗಿದೆ, ಭಕ್ತಿಯಾದರೋ ಎಲ್ಲಾ ವಿಧದಲ್ಲಿ ಪ್ರಯೋಜನವಾದದ್ದು. ಅದಕ್ಕೆ ಇಹಪರಗಳಲ್ಲಿನ ಜೀವನಕ್ಕೆ ವಾಗ್ದಾನ ಉಂಟು. … ಇದಕ್ಕಾಗಿ ನಾವು ಕಷ್ಟಪಡುತ್ತಿದ್ದೇವೆ, ಪ್ರಯಾಸಪಡುತ್ತಿದ್ದೇವೆ, ಯಾಕೆಂದರೆ ಎಲ್ಲಾ ಮನುಷ್ಯರಿಗೂ, ವಿಶೇಷವಾಗಿ ನಂಬುವವರಿಗೆ, ರಕ್ಷಕನಾಗಿರುವ ಜೀವವುಳ್ಳ ದೇವರ ಮೇಲೆ ನಾವು ನಿರೀಕ್ಷೆಯನ್ನಿಟ್ಟುಕೊಂಡವರಾಗಿದ್ದೇವೆ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

1 ತಿಮೊಥೆಯನಿಗೆ 6:11-16 (IRV)

ಕ್ರಿಸ್ತ ನಂಬಿಕೆಯ ಶ್ರೇಷ್ಠ ಹೋರಾಟವನ್ನು ಮಾಡು, ನಿತ್ಯಜೀವವನ್ನು ಹಿಡಿದುಕೋ... ನೀನು ಈ ಆಜ್ಞೆಯನ್ನು ನಿಷ್ಕಳಂಕವಾಗಿಯೂ ನಿಂದಾರಹಿತವಾಗಿಯೂ ಕಾಪಾಡಿಕೊಂಡಿರಬೇಕು

ಎಲೈ, ದೇವರ ಮನುಷ್ಯನೇ, ನೀನಾದರೋ ಇವುಗಳಿಗೆ ದೂರವಾಗಿರು. ನೀತಿ, ಭಕ್ತಿ, ನಂಬಿಕೆ, ಪ್ರೀತಿ, ಸ್ಥಿರಚಿತ್ತ ಹಾಗೂ ಸಾತ್ವಿಕತ್ವ ಇವುಗಳನ್ನು ಸಂಪಾದಿಸುವುದಕ್ಕೆ ಪ್ರಯಾಸಪಡು. ಕ್ರಿಸ್ತ ನಂಬಿಕೆಯ ಶ್ರೇಷ್ಠ ಹೋರಾಟವನ್ನು ಮಾಡು, ನಿತ್ಯಜೀವವನ್ನು ಹಿಡಿದುಕೋ. ಅದಕ್ಕಾಗಿ ನೀನು ದೇವರಿಂದ ಕರೆಯಲ್ಪಟ್ಟಿದಿ ಮತ್ತು ನೀನು ಅನೇಕ ಸಾಕ್ಷಿಗಳ ಮುಂದೆ ಒಳ್ಳೆಯ ಪ್ರತಿಜ್ಞೆಯನ್ನು ಮಾಡಿದಿಯಲ್ಲಾ. ಸರ್ವ ಸೃಷ್ಟಿಗೆ ಜೀವಾಧಾರಕನಾದ ದೇವರ ಮುಂದೆಯೂ, ಪೊಂತ್ಯ ಪಿಲಾತನ ಕಾಲದಲ್ಲಿ ಶ್ರೇಷ್ಠ ಪ್ರತಿಜ್ಞೆಯನ್ನು ತಾನೇ ಸಾಕ್ಷಿಯಾಗಿದ್ದು ಸ್ಥಾಪಿಸಿದ ಕ್ರಿಸ್ತ ಯೇಸುವಿನ ಮುಂದೆಯೂ ನಾನು ನಿನಗೆ ಆಜ್ಞಾಪಿಸುವುದೇನೆಂದರೆ, ನಮ್ಮ ಕರ್ತನಾದ ಯೇಸು ಕ್ರಿಸ್ತನ ಪ್ರತ್ಯಕ್ಷತೆಯ ತನಕ ನೀನು ಈ ಆಜ್ಞೆಯನ್ನು ನಿಷ್ಕಳಂಕವಾಗಿಯೂ ನಿಂದಾರಹಿತವಾಗಿಯೂ ಕಾಪಾಡಿಕೊಂಡಿರಬೇಕು. ಭಾಗ್ಯವಂತನಾದ ಏಕಾಧಿಪತಿಯು ತಾನು ನಿಗದಿಪಡಿಸಿರುವ ಸೂಕ್ತ ಸಮಯದಲ್ಲೇ ಆತನನ್ನು ಪ್ರತ್ಯಕ್ಷಪಡಿಸುವನು. ಆ ಏಕಾಧಿಪತಿಯು, ರಾಜಾಧಿರಾಜನೂ, ಕರ್ತಾಧಿಕರ್ತನೂ, ತಾನೊಬ್ಬನೇ ಅಮರತ್ವವುಳ್ಳವನೂ ಅಗಮ್ಯವಾದ ಬೆಳಕಿನಲ್ಲಿ ವಾಸಮಾಡುವವನೂ ಆಗಿದ್ದಾನೆ. ಮನುಷ್ಯರಲ್ಲಿ ಯಾರೂ ಆತನನ್ನು ಕಾಣಲಿಲ್ಲ, ಯಾರೂ ಕಾಣಲಾರರು. ಆತನಿಗೆ ಮಾನವೂ ನಿತ್ಯಾಧಿಪತ್ಯವೂ ಎಂದೆಂದಿಗೂ ಇರಲಿ. ಆಮೆನ್.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

2 ತಿಮೊಥೆಯನಿಗೆ 1:6-8, 12 (IRV)

ದೇವರು ನಮಗೆ ಕೊಟ್ಟಿರುವ ಆತ್ಮವು ಬಲ, ಪ್ರೀತಿ, ಸಂಯಮಗಳ ಆತ್ಮವೇ ಹೊರತು ಹೇಡಿತನದ ಆತ್ಮವಲ್ಲ

ಆದಕಾರಣ ನಾನು ನಿನ್ನ ತಲೆಯ ಮೇಲೆ ಹಸ್ತವನ್ನಿಟ್ಟದರ ಮೂಲಕ ನಿನಗೆ ದೊರಕಿದ ದೇವರ ಕೃಪಾವರವನ್ನು ಪ್ರಜ್ವಲಿಸುವಂತೆ ಮಾಡಬೇಕೆಂದು ನಿನ್ನನ್ನು ಜ್ಞಾಪಿಸುತ್ತಿದ್ದೇನೆ. ದೇವರು ನಮಗೆ ಕೊಟ್ಟಿರುವ ಆತ್ಮವು ಬಲ, ಪ್ರೀತಿ, ಸಂಯಮಗಳ ಆತ್ಮವೇ ಹೊರತು ಹೇಡಿತನದ ಆತ್ಮವಲ್ಲ. ಆದ್ದರಿಂದ ನೀನು ನಮ್ಮ ಕರ್ತನನ್ನು ಕುರಿತು ಹೇಳುವ ಸಾಕ್ಷಿಯ ವಿಷಯದಲ್ಲಾಗಲಿ ಆತನ ಸೆರೆಯವನಾದ ನನ್ನ ವಿಷಯದಲ್ಲಾಗಲಿ ನಾಚಿಕೆ ಪಡದೆ, ದೇವರ ಬಲವನ್ನು ಆಶ್ರಯಿಸಿ ನನ್ನೊಂದಿಗೆ ಸುವಾರ್ತೆಗೋಸ್ಕರ ಕಷ್ಟವನ್ನನುಭವಿಸು. … ಅದರ ನಿಮಿತ್ತದಿಂದಲೇ ಈ ಕಷ್ಟಗಳನ್ನು ಅನುಭವಿಸುತ್ತಾ ಇದ್ದೇನೆ. ಆದರೂ ನಾನು ನಾಚಿಕೆಪಡುವುದಿಲ್ಲ. ನಾನು ನಂಬಿರುವಾತನನ್ನು ಬಲ್ಲೆನು. ಆತನು ನನಗೆ ಒಪ್ಪಿಸಿಕೊಟ್ಟಿರುವುದನ್ನು ಆತನು ಆ ದಿನದವರೆಗೆ ಕಾಪಾಡುವುದಕ್ಕೆ ಶಕ್ತನಾಗಿದ್ದಾನೆಂದು ದೃಢವಾಗಿ ನಂಬಿದ್ದೇನೆ.

Indian Revised Version · CC BY-SA 4.0 · Bridge Connectivity Solutions

1 ತಿಮೊಥೆಯನಿಗೆ 1:3-5; 6:20-21 (IRV)

ಜ್ಞಾನೋಪದೇಶವೆಂದು ಸುಳ್ಳಾಗಿ ಹೇಳಿಕೊಳ್ಳುವ ಬೋಧನೆಗೆ ಸಂಬಂಧಪಟ್ಟ, ಪ್ರಾಪಂಚಿಕವಾದ ಆ ಹರಟೆ ಮಾತುಗಳಿಗೂ, ವಿವಾದಗಳಿಗೂ ನೀನು ದೂರವಾಗಿದ್ದು ನಿನ್ನ ವಶಕ್ಕೆ ಕೊಟ್ಟಿರುವುದನ್ನು ಕಾಪಾಡಿಕೋ

ನಾನು ಮಕೆದೋನ್ಯಕ್ಕೆ ಹೋಗುತ್ತಿದ್ದಾಗ ನೀನು ಎಫೆಸದಲ್ಲೇ ಇದ್ದುಕೊಂಡು ಅಲ್ಲಿರುವ ಕೆಲವರಿಗೆ, ನೀವು ಬೇರೆ ಉಪದೇಶವನ್ನು ಮಾಡಬಾರದೆಂತಲೂ, ಕಲ್ಪಿತಕಥೆಗಳಿಗೂ, ಕೊನೆಮೊದಲಿಲ್ಲದ ವಂಶಾವಳಿಗಳಿಗೂ ಲಕ್ಷ್ಯ ಕೊಡಬಾರದೆಂತಲೂ, ಆಜ್ಞಾಪಿಸಬೇಕೆಂಬುದಾಗಿ ನಿನಗೆ ಖಂಡಿತವಾಗಿ ಹೇಳಿದ ಪ್ರಕಾರ ಈಗಲೂ ಹೇಳುತ್ತಿದೇನೆ. ಅಂತಹ ಕಥೆಗಳೂ, ವಂಶಾವಳಿಗಳೂ ವಿವಾದಕ್ಕೆ ಎಡೆಮಾಡಿಕೊಡುತ್ತದೆಯೇ ಹೊರತು ದೇವರ ಯೋಜನೆಗಳಿಗೆ ಅನುಕೂಲವಾಗಿರುವುದಿಲ್ಲ. ನಂಬಿಕೆಯಿಂದ ಮಾತ್ರ ಅದು ಸಾಧ್ಯವಾಗುತ್ತದೆ. ಶುದ್ಧಹೃದಯ, ಒಳ್ಳೆಯ ಮನಸ್ಸಾಕ್ಷಿ, ಪ್ರಾಮಾಣಿಕವಾದ ನಂಬಿಕೆ ಎಂಬಿವುಗಳಿಂದ ಹುಟ್ಟಿದ ಪ್ರೀತಿಯೇ ದೇವಾಜ್ಞೆಯ ಗುರಿಯಾಗಿದೆ. … ಎಲೈ ತಿಮೊಥೆಯನೇ, ಜ್ಞಾನೋಪದೇಶವೆಂದು ಸುಳ್ಳಾಗಿ ಹೇಳಿಕೊಳ್ಳುವ ಬೋಧನೆಗೆ ಸಂಬಂಧಪಟ್ಟ, ಪ್ರಾಪಂಚಿಕವಾದ ಆ ಹರಟೆ ಮಾತುಗಳಿಗೂ, ವಿವಾದಗಳಿಗೂ ನೀನು ದೂರವಾಗಿದ್ದು ನಿನ್ನ ವಶಕ್ಕೆ ಕೊಟ್ಟಿರುವುದನ್ನು ಕಾಪಾಡಿಕೋ. ಕೆಲವರು ಆ ಸುಳ್ಳಾದ ಜ್ಞಾನವನ್ನು ಒಪ್ಪಿಕೊಂಡು ಕ್ರಿಸ್ತ ನಂಬಿಕೆಯಿಂದ ಭ್ರಷ್ಟರಾಗಿ ಹೋದರು. ಕೃಪೆಯು ನಿಮ್ಮೊಂದಿಗಿರಲಿ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಯಾಕೋಬನು *1:1-5 (IRV)*

ನಿಮ್ಮ ನಂಬಿಕೆಗೆ ಆಗುವ ಪರಿಶೋಧನೆಯು ನಿಮಗೆ ತಾಳ್ಮೆಯನ್ನುಂಟು ಮಾಡುತ್ತದೆಂದು… ನಿಮ್ಮಲ್ಲಿ ಯಾರಿಗಾದರು ಜ್ಞಾನದ ಕೊರತೆಯಿರುವುದಾದರೆ ಅವರು ದೇವರನ್ನು ಬೇಡಿಕೊಳ್ಳಲಿ

ದೇವರಿಗೂ ಕರ್ತನಾದ ಯೇಸು ಕ್ರಿಸ್ತನಿಗೂ ದಾಸನಾಗಿರುವ ಯಾಕೋಬನು ಅನ್ಯದೇಶಗಳಲ್ಲಿ ಚದುರಿರುವ ಇಸ್ರಾಯೇಲ್ಯರ ಹನ್ನೆರಡು ಗೋತ್ರದವರಿಗೂ ಬರೆಯುವುದೇನೆಂದರೆ, "ನಿಮಗೆ ಶುಭವಾಗಲಿ." ನನ್ನ ಸಹೋದರರೇ, ನೀವು ನಾನಾವಿಧವಾದ ಕಷ್ಟಗಳನ್ನು ಅನುಭವಿಸುವಾಗ ಅದನ್ನು ಕೇವಲ ಆನಂದಕರವಾದದ್ದೆಂದು ತಿಳಿಯಿರಿ. ಏಕೆಂದರೆ ನಿಮ್ಮ ನಂಬಿಕೆಗೆ ಆಗುವ ಪರಿಶೋಧನೆಯು ನಿಮಗೆ ತಾಳ್ಮೆಯನ್ನುಂಟು ಮಾಡುತ್ತದೆಂದು ನೀವು ತಿಳಿಯಿರಿ. ಆ ತಾಳ್ಮೆಯು ಸಂಪೂರ್ಣವಾಗಿ ನಿಮ್ಮಲ್ಲಿ ಫಲಿಸಲಿ, ಆಗ ನೀವು ಸರ್ವಸುಗುಣಸಂಪನ್ನರೂ, ಪರಿಪೂರ್ಣರೂ, ಯಾವುದಕ್ಕೂ ಕಡಿಮೆಯಿಲ್ಲದವರೂ ಆಗುವಿರಿ. ನಿಮ್ಮಲ್ಲಿ ಯಾರಿಗಾದರು ಜ್ಞಾನದ ಕೊರತೆಯಿರುವುದಾದರೆ ಅವರು ದೇವರನ್ನು ಬೇಡಿಕೊಳ್ಳಲಿ, ಅದು ಅವರಿಗೆ ದೊರಕುವುದು. ಯಾಕೆಂದರೆ ದೇವರು ಹಂಗಿಸದೆ ಎಲ್ಲರಿಗೂ ಉದಾರವಾಗಿ ಕೊಡುವಾತನಾಗಿದ್ದಾನೆ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಯಾಕೋಬನು *5:13-14, 16, 19-20 (IRV)*

ನಿಮ್ಮ ಪಾಪಗಳನ್ನು ಒಬ್ಬರಿಗೊಬ್ಬರು ಅರಿಕೆ ಮಾಡಿ… ಒಬ್ಬರಿಗೋಸ್ಕರ ಒಬ್ಬರು ಪ್ರಾರ್ಥಿಸಿರಿ… ಅವನ ಆತ್ಮವನ್ನು ಮರಣದಿಂದ ತಪ್ಪಿಸಿ

ನಿಮ್ಮಲ್ಲಿ ಯಾವನಾದರೂ ಬಾಧೆಪಡುವವನು ಇದ್ದರೆ, ಅವನು ದೇವರನ್ನು ನಂಬಿಕೆಯಿಂದ ಪ್ರಾರ್ಥಿಸಲಿ. ನಿಮ್ಮಲ್ಲಿ ಯಾವನಾದರೂ ಸಂತೋಷಪಡುವವನು ಇದ್ದರೆ, ಅವನು ದೇವರಿಗೆ ಸ್ತುತಿಗೀತೆಗಳನ್ನು ಹಾಡಲಿ. ನಿಮ್ಮಲ್ಲಿ ಯಾವನಾದರೂ ಅಸ್ವಸ್ಥನಾಗಿರುವವನು ಇದ್ದರೆ, ಅವನು ಸಭೆಯ ಹಿರಿಯರನ್ನು ಕರೆದು ಪ್ರಾರ್ಥಿಸುವಂತೆ ವಿನಂತಿಸಲಿ. ಅವರು ಕರ್ತನ ಹೆಸರಿನಲ್ಲಿ ಅವನಿಗೆ ಎಣ್ಣೆ ಹಚ್ಚಿ ಅವನಿಗೋಸ್ಕರ ದೇವರನ್ನು ಪ್ರಾರ್ಥಿಸಲಿ. … ಹೀಗಿರಲು ನೀವು ಸ್ವಸ್ಥವಾಗಬೇಕಾದರೆ ನಿಮ್ಮ ಪಾಪಗಳನ್ನು ಒಬ್ಬರಿಗೊಬ್ಬರು ಅರಿಕೆ ಮಾಡಿ,, ಒಬ್ಬರಿಗೋಸ್ಕರ ಒಬ್ಬರು ಪ್ರಾರ್ಥಿಸಿರಿ. ನೀತಿವಂತನ ಅತ್ಯಾಸಕ್ತಿಯುಳ್ಳ ಪ್ರಾರ್ಥನೆಯು ಬಹು ಸಾಮರ್ಥ್ಯವುಳ್ಳದಾಗಿರುತ್ತದೆ. … ನನ್ನ ಸಹೋದರರೇ, ನಿಮ್ಮಲ್ಲಿ ಯಾರಾದರು ಸತ್ಯ ಮಾರ್ಗವನ್ನು ಬಿಟ್ಟು ತಪ್ಪಿ ನಡೆಯುತ್ತಿದ್ದರೆ ಮತ್ತೊಬ್ಬನು ಅವನನ್ನು ಸನ್ಮಾರ್ಗಕ್ಕೆ ತಂದರೆ; ಒಬ್ಬ ಪಾಪಿಯನ್ನು ತಪ್ಪಾದ ಮಾರ್ಗದಿಂದ ತಪ್ಪಿಸಿ, ಪರಿವರ್ತಿಸಿ ಅವನ ಆತ್ಮವನ್ನು ಮರಣದಿಂದ ತಪ್ಪಿಸಿ ಬಹು ಪಾಪಗಳನ್ನು ಮುಚ್ಚಿದವನಾದನೆಂದು ತಿಳಿದುಕೊಳ್ಳಲಿ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಯಾಕೋಬನು *3:2, 10, 12, 18, 17 (IRV)*

ಅನೇಕ ವಿಷಯಗಳಲ್ಲಿ ನಾವೆಲ್ಲರೂ ತಪ್ಪುಮಾಡುವವರಾಗಿದ್ದಾರೆ… ಮೇಲಿಂದ ಬರುವ ಜ್ಞಾನವು ಮೊದಲು ಪರಿಶುದ್ಧವಾದದ್ದು ಆಮೇಲೆ ಸಮಾಧಾನಕರವಾದದ್ದು, ವಿನಯವುಳ್ಳದ್ದು… ಪಕ್ಷಪಾತವಿಲ್ಲದ್ದು

<u>ಅನೇಕ ವಿಷಯಗಳಲ್ಲಿ ನಾವೆಲ್ಲರೂ ತಪ್ಪುಮಾಡುವವರಾಗಿದ್ದಾರೆ</u>. ಒಬ್ಬನು ಮಾತಿನಲ್ಲಿ ತಪ್ಪಿ ನಡೆಯದಿದ್ದರೆ ಅವನು ಸರ್ವಸುಗುಣವುಳ್ಳವನೂ ತನ್ನ ಇಡೀ ದೇಹವನ್ನೆಲ್ಲಾ ಸ್ವಾಧೀನಪಡಿಸಿಕೊಳ್ಳುವುದಕ್ಕೆ ಸಮರ್ಥನೂ ಆಗಿದ್ದಾನೆ. … ಅದೇ ಬಾಯಿಂದ ಸ್ತುತಿ ಮತ್ತು ಶಾಪ ಎರಡೂ ಬರುತ್ತವೆ. ನನ್ನ ಸಹೋದರರೇ, … ನನ್ನ ಸಹೋದರರೇ, ಅಂಜೂರದ ಮರವು ಎಣ್ಣೆ ಮರದ ಕಾಯಿ ಬಿಡುವುದೋ? ದ್ರಾಕ್ಷಿ ಬಳ್ಳಿಯಲ್ಲಿ ಅಂಜೂರದ ಹಣ್ಣು ಬಿಡುವುದೋ? ಹಾಗೆಯೇ ಉಪ್ಪುನೀರಿನ ಬುಗ್ಗೆಯಿಂದ ಸಿಹಿ ನೀರು ಬರುವುದಿಲ್ಲ. … ಸಮಾಧಾನವನ್ನು ಉಂಟುಮಾಡುವವರು ಸಮಾಧಾನವೆಂಬ ಬೀಜವನ್ನು ಬಿತ್ತಿ ನೀತಿಯೆಂಬ ಫಲವನ್ನು ಕೊಯ್ಯುವರು. … ಆದರೆ <u>ಮೇಲಿಂದ ಬರುವ ಜ್ಞಾನವು ಮೊದಲು ಪರಿಶುದ್ಧವಾದದ್ದು ಆಮೇಲೆ ಸಮಾಧಾನಕರವಾದದ್ದು, ವಿನಯವುಳ್ಳದ್ದು</u>, ಸಂತೋಷವಾಗಿ ಒಪ್ಪಿಕೊಳ್ಳುವಂಥದ್ದು, ಕರುಣೆ ಮತ್ತು ಒಳ್ಳೆ ಫಲಗಳಿಂದ ತುಂಬಿರುವಂಥದ್ದು, <u>ಪಕ್ಷಪಾತವಿಲ್ಲದ್ದು</u>, ಪ್ರಾಮಾಣಿಕವಾದ್ದದು ಆಗಿದೆ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಯೂದನು *1:3-5, 22-23 (IRV)*

ಒಂದೇ ಸಾರಿ ಒಪ್ಪಿಸಲ್ಪಟ್ಟ ನಂಬಿಕೆಯನ್ನು ಕಾಪಾಡಿಕೊಳ್ಳುವುದಕ್ಕೆ, ನೀವು ಹೋರಾಡಬೇಕೆಂದು… ನಮ್ಮ ದೇವರ ಕೃಪೆಯನ್ನು ನೆವಮಾಡಿಕೊಂಡು ಕಾಮಾಭಿಲಾಷೆಯ ಕೃತ್ಯಗಳನ್ನು ನಡಿಸುವವರೂ

ಪ್ರಿಯರೇ, ನಮಗೆ ಹುದುವಾಗಿರುವ ರಕ್ಷಣೆಯ ವಿಷಯದಲ್ಲಿ ನಿಮಗೆ ಬರೆಯುವುದಕ್ಕೆ ಪೂರ್ಣಾಸಕ್ತಿಯಿಂದ ಪ್ರಯತ್ನ ಮಾಡುತ್ತಿದ್ದಾಗ, ದೇವಜನರಿಗೆ ಶಾಶ್ವತವಾಗಿರುವಂತೆ ಒಂದೇ ಸಾರಿ ಒಪ್ಪಿಸಲ್ಪಟ್ಟ ನಂಬಿಕೆಯನ್ನು ಕಾಪಾಡಿಕೊಳ್ಳುವುದಕ್ಕೆ, ನೀವು ಹೋರಾಡಬೇಕೆಂದು ಎಚ್ಚರಿಸಿ ಬರೆಯುವುದು ನನಗೆ ಅವಶ್ಯವೆಂದು ತೋರಿತು. ಏಕೆಂದರೆ ಭಕ್ತಿಹೀನರೂ, ನಮ್ಮ ದೇವರ ಕೃಪೆಯನ್ನು ನೆವಮಾಡಿಕೊಂಡು ಕಾಮಾಭಿಲಾಷೆಯ ಕೃತ್ಯಗಳನ್ನು ನಡಿಸುವವರೂ, ನಮ್ಮ ಒಬ್ಬನೇ ಒಡೆಯನೂ ಕರ್ತನೂ ಆಗಿರುವ ಯೇಸು ಕ್ರಿಸ್ತನನ್ನು ಅಲ್ಲಗಳೆಯುವ ಕೆಲವು ಜನರು ರಹಸ್ಯವಾಗಿ ಸಭೆಯ ಒಳಗೆ ಹೊಕ್ಕಿದ್ದಾರೆ. ಇವರು ದಂಡನೆಗಾಗಿ ಪೂರ್ವದಲ್ಲಿಯೇ ನೇಮಕವಾಗಿದ್ದಾರೆ ಎಂದು ಬರೆದದೆ. ನೀವು ಸಮಸ್ತವನ್ನು ಮೊದಲೇ ತಿಳಿದವರಾಗಿದ್ದರೂ, ನಾನು ಮುಂದಣ ಕೆಲವು ಸಂಗತಿಗಳನ್ನು ನಿಮ್ಮ ಜ್ಞಾಪಕಕ್ಕೆ ತರಬೇಕೆಂದು ಅಪೇಕ್ಷಿಸುತ್ತೇನೆ. ಅವು ಯಾವುದೆಂದರೆ, ಕರ್ತನು ತನ್ನ ಪ್ರಜೆಗಳನ್ನು ಐಗುಪ್ತ ದೇಶದೊಳಗಿಂದ ರಕ್ಷಿಸಿದರೂ, ತರುವಾಯ ಅವರೊಳಗೆ ನಂಬದೇ ಹೋದವರನ್ನು ನಾಶಮಾಡಿದನು. … ಸಂಶಯಪಡುವವರಿಗೆ ಕರುಣೆಯನ್ನು ತೋರಿಸಿರಿ, ಬೆಂಕಿಯ ಬಾಯಲ್ಲಿ ಇರುವವರನ್ನು ಎಳೆದು ಸಂರಕ್ಷಿಸಿರಿ, ಕೆಲವರನ್ನು ಭಯಪಡುತ್ತಾ ಕರುಣಿಸಿರಿ. ಶಾರೀರಿಕ ನಡತೆಯಿಂದ ಹೊಲಸಾದ ಅವರ ಉಡುಪನ್ನೂ ಸಹ ಹಗೆಮಾಡಿರಿ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ವಿಮೋಚನಕಾಂಡ *24:7, 17; 32:23, 30, 34 (IRV)*

ಯೆಹೋವನ ತೇಜಸ್ಸು ಬೆಟ್ಟದ ತುದಿಯಲ್ಲಿ ದಹಿಸುವ ಬೆಂಕಿಯಂತೆ ಇಸ್ರಾಯೇಲರಿಗೆ ಕಾಣಿಸಿತು

ತರುವಾಯ ಒಡಂಬಡಿಕೆಯ ಗ್ರಂಥವನ್ನು ತೆಗೆದುಕೊಂಡು ಜನರಿಗೆ ಕೇಳಿಸುವಂತೆ ಓದಿದನು. ಅವರು ಕೇಳಿ, "ಯೆಹೋವನ ಆಜ್ಞೆಗಳನ್ನೆಲ್ಲಾ ನಾವು ಅನುಸರಿಸಿ ವಿಧೇಯರಾಗುವೆವು" ಅಂದರು. … ಯೆಹೋವನ ತೇಜಸ್ಸು ಬೆಟ್ಟದ ತುದಿಯಲ್ಲಿ ದಹಿಸುವ ಬೆಂಕಿಯಂತೆ ಇಸ್ರಾಯೇಲರಿಗೆ ಕಾಣಿಸಿತು. … ಅವರು ನನ್ನ ಬಳಿಗೆ ಬಂದು, 'ನಮ್ಮನ್ನು ಮುನ್ನಡೆಸಿಕೊಂಡು ಹೋಗುವುದಕ್ಕೆ ಒಬ್ಬ ದೇವರನ್ನು ಮಾಡಿಸಿಕೊಡು, ಐಗುಪ್ತ ದೇಶದಿಂದ ನಮ್ಮನ್ನು ಕರೆದುಕೊಂಡು ಬಂದ ಮೋಶೆಗೆ ಏನಾಯಿತೋ ಗೊತ್ತಿಲ್ಲ' ಅಂದರು. … ಮರುದಿನದಲ್ಲಿ ಮೋಶೆಯು ಜನರಿಗೆ, "ನೀವು ಮಹಾ ಪಾಪವನ್ನು ಮಾಡಿರುವಿರಿ. ಆದರೂ ನಾನು ಬೆಟ್ಟವನ್ನು ಹತ್ತಿ ಯೆಹೋವನ ಸನ್ನಿಧಿಗೆ ಹೋಗುವೆನು. ಒಂದು ವೇಳೆ ನೀವು ಮಾಡಿದ ಪಾಪಕೃತ್ಯಕ್ಕೆ ಪ್ರಾಯಶ್ಚಿತ್ತವನ್ನು ನಾನು ಮಾಡಬಹುದೇನೋ" ಎಂದು ಹೇಳಿದನು. … ನೀನು ಇಲ್ಲಿಂದ ಹೊರಟು ನಾನು ನಿನಗೆ ಹೇಳಿದ ದೇಶಕ್ಕೆ ಈ ಜನರನ್ನು ನಡೆಸಿಕೊಂಡು ಹೋಗು. ನೋಡು, ನನ್ನ ದೂತನು ನಿನ್ನ ಮುಂದೆ ನಡೆದು ಮುನ್ನಡೆಸುವನು, ಆದರೂ ನನ್ನ ನ್ಯಾಯತೀರ್ಪಿನ ದಿನದಲ್ಲಿ ನಾನು ಅವರ ಪಾಪಕ್ಕೆ ತಕ್ಕಂತೆ ಅವರನ್ನು ದಂಡಿಸುವೆನು."

Indian Revised Version · CC BY-SA 4.0 · Bridge Connectivity Solutions

ಯೆಹೋಶುವನು *2:11*; ಇಬ್ರಿಯರಿಗೆ *11:31*; ಯಾಕೋಬನು *2:23, 25-26 (IRV)*

ನಿಮ್ಮ ದೇವರಾದ ಯೆಹೋವನೊಬ್ಬನೇ ಪರಲೋಕದಲ್ಲಿಯೂ ಭೂಲೋಕದಲ್ಲಿಯೂ ದೇವರು... ಕ್ರಿಯೆಗಳಿಲ್ಲದ ನಂಬಿಕೆಯೂ ಸತ್ತದ್ದಾಗಿದೆ

ನಮ್ಮ ಎದೆ ಒಡೆದು ಹೋಯಿತು; ನಿಮ್ಮನ್ನು ಎದುರಿಸುವ ಧೈರ್ಯವು ಯಾರಿಗೂ ಇಲ್ಲ. ನಿಮ್ಮ ದೇವರಾದ ಯೆಹೋವನೊಬ್ಬನೇ ಪರಲೋಕದಲ್ಲಿಯೂ ಭೂಲೋಕದಲ್ಲಿಯೂ ದೇವರು. ... ನಂಬಿಕೆಯಿಂದಲೇ ರಾಹಾಬಳೆಂಬ ಸೂಳೆಯು ಗೂಢಚಾರರನ್ನು ಸಮಾಧಾನವಾಗಿ ಸೇರಿಸಿಕೊಂಡು, ಅವಿಧೇಯರೊಂದಿಗೆ ನಾಶವಾಗದೆ ಉಳಿದಳು. ... "ಅಬ್ರಹಾಮನು ದೇವರನ್ನು ನಂಬಿದನು ಮತ್ತು ಆ ನಂಬಿಕೆ ಅವನ ಲೆಕ್ಕಕ್ಕೆ ನೀತಿಯೆಂದು ಎಣಿಸಲ್ಪಟ್ಟಿತು" ಎಂಬ ಧರ್ಮಶಾಸ್ತ್ರದ ಮಾತು ಹೀಗೆ ನೆರವೇರಿತು. ಆದ್ದರಿಂದ ಅಬ್ರಹಾಮನು ದೇವರ ಸ್ನೇಹಿತನೆಂದು ಕರೆಯಲ್ಪಟ್ಟನು. ... ಅದೇ ರೀತಿಯಾಗಿ ವೇಶ್ಯೆಯಾದ ರಾಹಾಬಳು ಗೂಢಚಾರರನ್ನು ತನ್ನ ಮನೆಯಲ್ಲಿ ಸೇರಿಸಿಕೊಂಡು, ಬೇರೆ ದಾರಿಯಿಂದ ಅವರನ್ನು ಕಳುಹಿಸಿದ ಕ್ರಿಯೆಗಳಿಂದಲೇ ನೀತಿವಂತಳೆಂಬ, ನಿರ್ಣಯವನ್ನು ಹೊಂದಿದಳಲ್ಲವೇ? ಆತ್ಮವಿಲ್ಲದ ದೇಹವು ಸತ್ತದ್ದಾಗಿರುವ ಪ್ರಕಾರವೇ ಕ್ರಿಯೆಗಳಿಲ್ಲದ ನಂಬಿಕೆಯೂ ಸತ್ತದ್ದಾಗಿದೆ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ರೂತಳು *1:16-17; 4:14-15 (IRV)*

ಈ ಹೊತ್ತು ನಿನಗೆ ಬಾಧ್ಯಸ್ಥನನ್ನು ದಯಪಾಲಿಸಿದ ಯೆಹೋವನಿಗೆ ಸ್ತೋತ್ರವಾಗಲಿ

ಆಕೆಯು, "ನಿನ್ನನ್ನು ಬಿಟ್ಟು ಹಿಂದಿರುಗಿ ಹೋಗಬೇಕೆಂದು ನನ್ನನ್ನು ಒತ್ತಾಯಪಡಿಸಬೇಡ. ನೀನು ಎಲ್ಲಿಗೆ ಹೋದರೂ ನಾನೂ ಅಲ್ಲಿಗೆ ಬರುವೆನು; ನೀನು ವಾಸಿಸುವಲ್ಲೇ ನಾನೂ ವಾಸಿಸುವೆನು; ನಿನ್ನ ಜನರೇ ನನ್ನ ಜನರು; ನಿನ್ನ ದೇವರೇ ನನ್ನ ದೇವರು. ನೀನು ಸಾಯುವಲ್ಲೇ ನಾನೂ ಸಾಯುವೆನು; ಅಲ್ಲೇ ನನಗೆ ಸಮಾಧಿಯಾಗಬೇಕು. ಮರಣದಿಂದಲ್ಲದೆ ನಾನು ನಿನ್ನನ್ನು ಅಗಲಿದರೆ ಯೆಹೋವನು ನನ್ನನ್ನು ಹೆಚ್ಚಾಗಿ ಶಿಕ್ಷಿಸಲಿ" ಎಂದಳು. … ಆಗ ಹೆಂಗಸರು ನವೊಮಿಗೆ "ಈ ಹೊತ್ತು ನಿನಗೆ ಬಾಧ್ಯಸ್ಥನನ್ನು ದಯಪಾಲಿಸಿದ ಯೆಹೋವನಿಗೆ ಸ್ತೋತ್ರವಾಗಲಿ. ಈ ಮಗನು ಇಸ್ರಾಯೇಲ್ಯರಲ್ಲಿ ಪ್ರಖ್ಯಾತ್ಯನಾಗಲಿ. ಇವನು ನಿನಗೆ ನವಚೈತನ್ಯ ನೀಡಿ ಪುನರ್ಜನ್ಮ ಹೊಂದುವಂತೆ ಮಾಡುವನು, ವೃದ್ಧಾಪ್ಯದಲ್ಲಿ ನಿನಗೆ ಸಂರಕ್ಷಕನಾಗಿರುವನು. ನಿನ್ನನ್ನು ಬಹಳವಾಗಿ ಪ್ರೀತಿಸುತ್ತಾ ಏಳು ಮಂದಿ ಮಕ್ಕಳಿಗಿಂತ ಹೆಚ್ಚಾಗಿ ನಿನ್ನನ್ನು ಪ್ರೀತಿಸಿ ಗೌರವಿಸುವ ನಿನ್ನ ಸೊಸೆಯು ಇವನನ್ನು ಹೆತ್ತಳಲ್ಲಾ" ಎಂದು ಹೇಳಿದರು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ನೆಹೆಮೀಯನು *6:1-3, 8-9 (IRV)*

ನಮ್ಮನ್ನು ಹೆದರಿಸುವುದಕ್ಕೆ ಪ್ರಯತ್ನಿಸಿದರು… ನನ್ನ ದೇವರೇ, ನನ್ನ ಕೈಗಳನ್ನು ಬಲಗೊಳಿಸಿ ನನ್ನನ್ನು ಧೈರ್ಯಪಡಿಸು

ನಾನು ಪೌಳಿಗೋಡೆಯನ್ನು ಪುನಃ ಕಟ್ಟಿಸಿದೆನು, ಆದರೆ ಹೆಬ್ಬಾಗಿಲುಗಳನ್ನೂ ಇನ್ನೂ ಇಡಿಸಿರಲಿಲ್ಲ. ಜೀರ್ಣೋದ್ಧಾರದ ಕಾರ್ಯಗಳೆಲ್ಲವೂ ಪೂರ್ಣವಾಯಿತೆಂಬುದು ಸನ್ಬಲ್ಲಟ್, ಟೋಬೀಯ, ಅರಬಿಯನಾದ ಗೆಷೆಮ್ ಇವರಿಗೂ, ನಮ್ಮ ಬೇರೆ ವಿರೋಧಿಗಳಿಗೂ ಗೊತ್ತಾಯಿತು. ಅವರಲ್ಲಿ ಸನ್ಬಲ್ಲಟ್, ಗೆಷೆಮರು ನನಗೆ, “ಓನೋ ಸಮಭೂಮಿಯ ಒಂದು ಗ್ರಾಮದಲ್ಲಿ ಒಂದು ಸಭೆ ಸೇರೋಣ ಬಾ” ಎಂದು ಹೇಳಿ ಕಳುಹಿಸಿದರು. ಇದು ಅವರು ನನಗೆ ಕೇಡು ಬಗೆಯುವುದಕ್ಕಾಗಿಯೇ ಎಂದು ತಿಳಿಯಿತು. ಆಗ ನಾನು ದೂತರ ಮುಖಾಂತರವಾಗಿ ಅವರಿಗೆ, “ನನಗೆ ಒಂದು ದೊಡ್ಡ ಕೆಲಸವುಂಟು; ಅದನ್ನು ಬಿಟ್ಟು ನಿಮ್ಮ ಬಳಿಗೆ ಬಂದರೆ ಆ ಕೆಲಸವು ನಿಂತು ಹೋಗುವುದು; ನಾನು ಬರಲು ಸಾಧ್ಯವಿಲ್ಲ” ಎಂದು ಹೇಳಿ ಕಳುಹಿಸಿದೆನು. … ಅದಕ್ಕೆ ನಾನು, “ನೀನು ಬರೆದಿರುವಂಥ ವಿಚಾರಗಳು ಯಾವುದು ಇಲ್ಲಿ ನಡೆದಿರುವುದಿಲ್ಲ; ಅದನ್ನು ನೀನೇ ನಿನ್ನ ಮನಸ್ಸಿನಲ್ಲಿ ಕಲ್ಪಿಸಿಕೊಂಡಿರುವೆ” ಎಂದು ಹೇಳಿ ಕಳುಹಿಸಿದೆನು. ಹೀಗೆ ಎಲ್ಲರೂ, “ಇವರ ಕೈಗಳು ಜೋಲು ಬಿದ್ದು ಕೆಲಸವನ್ನು ಮುಗಿಸದೆ ಇರಲಿ” ಎಂದು ನಮ್ಮನ್ನು ಹೆದರಿಸುವುದಕ್ಕೆ ಪ್ರಯತ್ನಿಸಿದರು. ಆದರೆ ನನ್ನ ದೇವರೇ, ನನ್ನ ಕೈಗಳನ್ನು ಬಲಗೊಳಿಸಿ ನನ್ನನ್ನು ಧೈರ್ಯಪಡಿಸು ಎಂದು ಪ್ರಾರ್ಥಿಸಿದೆನು

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಕೀರ್ತನೆಗಳು 2:1-5, 8-12 (IRV)

ಯೆಹೋವನನ್ನು ಭಯಭಕ್ತಿಯಿಂದ ಸೇವಿಸಿರಿ… ಯೆಹೋವನನ್ನು ಆಶ್ರಯಿಸುವವರೆಲ್ಲರು ಧನ್ಯರು

ಅನ್ಯಜನಾಂಗಗಳು ದಂಗೆಗೆ ಏಳುವುದೂ, ಜನಾಂಗಗಳು ವ್ಯರ್ಥಕಾರ್ಯಗಳನ್ನು ಯೋಚಿಸುವುದೂ ಏಕೆ? ಅರಸರು ಒಟ್ಟಾಗಿ ಸೇರಿ ಆಲೋಚಿಸುತ್ತಿದ್ದಾರೆ. ದೇಶಾಧಿಪತಿಗಳು ಯೆಹೋವನಿಗೂ ಮತ್ತು ಆತನಿಂದ ಅಭಿಷೇಕಿಸಲ್ಪಟ್ಟವನಿಗೂ ವಿರುದ್ಧವಾಗಿ ಸನ್ನದ್ಧರಾಗಿ ನಿಂತಿದ್ದಾರೆ, “ನಮಗೆ ಅವರು ಹಾಕಿದ ಬಂಧನಗಳನ್ನು ಕಿತ್ತುಹಾಕಿ, ಬೇಡಿಗಳನ್ನು ಮುರಿದು ಬಿಸಾಡೋಣ” ಎಂದು ಮಾತನಾಡಿಕೊಳ್ಳುತ್ತಾರಲ್ಲಾ. ಪರಲೋಕದಲ್ಲಿ ಆಸೀನನಾಗಿರುವಾತನು ಅದಕ್ಕೆ ನಗುವನು; ಕರ್ತನು ಅವರನ್ನು ಪರಿಹಾಸ್ಯಮಾಡುವನು. ಅನಂತರ ಆತನು ಸಿಟ್ಟಾಗಿ, ಕೋಪಾವೇಶದಿಂದ ಅವರನ್ನು ಕಳವಳಗೊಳಿಸಿ, … ನೀನು ಕೇಳಿಕೊಂಡರೆ ನಾನು ಅನ್ಯಜನಗಳನ್ನೆಲ್ಲಾ ನಿನಗೆ ಅಧೀನಮಾಡುವೆನು; ಭೂಮಿಯ ಕಟ್ಟಕಡೆಯವರೆಗೂ ಇರುವ ಎಲ್ಲಾ ದೇಶಗಳನ್ನೂ ನಿನಗೆ ಸ್ವತ್ತಾಗಿ ಕೊಡುವೆನು. ನೀನು ಕಬ್ಬಿಣದ ಗದೆಯಿಂದ ಅವರನ್ನು ನಾಶಮಾಡುವಿ; ಮಣ್ಣಿನ ಮಡಿಕೆಗಳನ್ನೋ ಎಂಬಂತೆ ಅವರನ್ನು ಒಡೆದುಹಾಕುವಿ” ಎಂದು ಹೇಳಿದನು. ಆದುದರಿಂದ ಅರಸುಗಳಿರಾ, ವಿವೇಕಿಗಳಾಗಿರಿ; ದೇಶಾಧಿಪತಿಗಳಿರಾ, ಬುದ್ಧಿವಾದಕ್ಕೆ ಕಿವಿಗೊಡಿರಿ. ಯೆಹೋವನನ್ನು ಭಯಭಕ್ತಿಯಿಂದ ಸೇವಿಸಿರಿ; ನಡುಗುತ್ತಾ ಉಲ್ಲಾಸಪಡಿರಿ. ಆತನ ಮಗನಿಗೆ ಮುದ್ದಿಡಿರಿ; ಇಲ್ಲವಾದರೆ ಯೆಹೋವನ ಕೋಪವು ಬೇಗನೆ ಪ್ರಜ್ವಲಿಸಲು ನೀವು ದಾರಿಯಲ್ಲೇ ನಾಶವಾದೀರಿ. ಯೆಹೋವನನ್ನು ಆಶ್ರಯಿಸುವವರೆಲ್ಲರು ಧನ್ಯರು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಕೀರ್ತನೆಗಳು *19:1, 7-8, 12-14 (IRV)*

ಆಕಾಶವು ದೇವರ ಪ್ರಭಾವವನ್ನು ಪ್ರಚುರಪಡಿಸುತ್ತದೆ… ಮರೆಯಾದ ದೋಷಗಳಿಂದ ನನ್ನನ್ನು ನಿರ್ಮಲಮಾಡು… ಬೇಕೆಂದು ಪಾಪಮಾಡದಂತೆ ನಿನ್ನ ದಾಸನನ್ನು ಕಾಪಾಡು. ಅಂಥ ಪಾಪಗಳು ನನ್ನನ್ನು ಆಳದಿರಲಿ

ಆಕಾಶವು ದೇವರ ಪ್ರಭಾವವನ್ನು ಪ್ರಚುರಪಡಿಸುತ್ತದೆ; ಗಗನವು ಆತನ ಕೈಕೆಲಸವನ್ನು ತಿಳಿಸುತ್ತದೆ. … ಯೆಹೋವನ ಧರ್ಮಶಾಸ್ತ್ರವು ಲೋಪವಿಲ್ಲದ್ದು; ಅದು ಪ್ರಾಣವನ್ನು ಉಜ್ಜೀವಿಸಮಾಡುವಂಥದ್ದು. ಯೆಹೋವನ ಕಟ್ಟಳೆಗಳು ನಂಬಿಕೆಗೆ ಯೋಗ್ಯವಾದದ್ದು; ಅವು ಬುದ್ಧಿಹೀನರಿಗೆ ವಿವೇಕಪ್ರದವಾಗಿದೆ. ಯೆಹೋವನ ಆಜ್ಞೆಗಳು ನೀತಿಯುಳ್ಳವುಗಳಾಗಿವೆ; ಮನಸ್ಸನ್ನು ಹರ್ಷಪಡಿಸುತ್ತವೆ. ಯೆಹೋವನ ಆಜ್ಞೆ ಪವಿತ್ರವಾದದ್ದು; ಕಣ್ಣುಗಳನ್ನು ಕಳೆಗೊಳಿಸುತ್ತದೆ. … ತನ್ನ ತಪ್ಪುಗಳನ್ನೆಲ್ಲಾ ತಿಳಿದುಕೊಳ್ಳುವವನು ಯಾರು? ಮರೆಯಾದ ದೋಷಗಳಿಂದ ನನ್ನನ್ನು ನಿರ್ಮಲಮಾಡು. ಅದಲ್ಲದೆ ಬೇಕೆಂದು ಪಾಪಮಾಡದಂತೆ ನಿನ್ನ ದಾಸನನ್ನು ಕಾಪಾಡು. ಅಂಥ ಪಾಪಗಳು ನನ್ನನ್ನು ಆಳದಿರಲಿ. ಆಗ ನಾನು ತಪ್ಪಿಲ್ಲದವನಾಗಿ ಮಹಾದ್ರೋಹಕ್ಕೆ ಒಳಗಾಗುವುದಿಲ್ಲ. ಯೆಹೋವನೇ ನನ್ನ ಶರಣನೇ, ನನ್ನ ವಿಮೋಚಕನೇ, ನನ್ನ ಮಾತುಗಳೂ ಮತ್ತು ನನ್ನ ಹೃದಯದ ಧ್ಯಾನವೂ ನಿನಗೆ ಸಮರ್ಪಕವಾಗಿರಲಿ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಕೀರ್ತನೆಗಳು *27:1, 4-6, 8-10, 14 (IRV)*

ಯೆಹೋವನು ನನಗೆ ಬೆಳಕೂ, ರಕ್ಷಕನೂ ಆಗಿದ್ದಾನೆ; ನಾನು ಯಾರಿಗೆ ಭಯಪಟ್ಟೇನು?… ನಿನ್ನ ಹೃದಯವು ಧೈರ್ಯದಿಂದಿರಲಿ

ಯೆಹೋವನು ನನಗೆ ಬೆಳಕೂ, ರಕ್ಷಕನೂ ಆಗಿದ್ದಾನೆ; ನಾನು ಯಾರಿಗೆ ಭಯಪಟ್ಟೇನು? ಯೆಹೋವನು ನನ್ನ ಪ್ರಾಣದ ಆಧಾರವು; ನಾನು ಯಾರಿಗೆ ಹೆದರೇನು? … ನನ್ನ ಜೀವಮಾನದಲ್ಲೆಲ್ಲಾ ಯೆಹೋವನ ಮನೆಯಲ್ಲಿ ವಾಸಮಾಡುತ್ತಾ, ಆತನ ಪ್ರಸನ್ನತೆಯನ್ನು ನೋಡುವುದಕ್ಕೂ, ಆತನ ಮಂದಿರದಲ್ಲಿ ಧ್ಯಾನ ಮಾಡುವುದಕ್ಕೂ ನನಗೆ ಅಪ್ಪಣೆಯಾಗಬೇಕೆಂಬ ಒಂದೇ ವರವನ್ನು ಯೆಹೋವನಿಂದ ಕೇಳಿಕೊಂಡು ಅದನ್ನೇ ಎದುರು ನೋಡುತ್ತಿರುವೆನು. ಅಪಾಯಕಾಲದಲ್ಲಿ ಆತನು ನನ್ನನ್ನು ಗುಪ್ತಸ್ಥಳದಲ್ಲಿ ಅಡಗಿಸುವನು; ತನ್ನ ಗುಡಾರವೆಂಬ ಆಶ್ರಯಸ್ಥಾನದಲ್ಲಿ ನನ್ನನ್ನು ಭದ್ರಪಡಿಸುವನು; ಪರ್ವತಶಿಖರದ ಮೇಲೆ ನನ್ನನ್ನು ಸುರಕ್ಷಿತವಾಗಿ ನಿಲ್ಲಿಸುವನು. ಹೀಗಿರುವುದರಿಂದ ನನ್ನ ಸುತ್ತಲಿರುವ ವೈರಿಗಳ ಮೇಲೆ, ನನ್ನ ತಲೆ ಎತ್ತಲ್ಪಟ್ಟಿರುವುದು; ನಾನು ಯೆಹೋವನ ಗುಡಾರದಲ್ಲಿ, ಉತ್ಸಾಹಧ್ವನಿಯೊಡನೆ ಯಜ್ಞಗಳನ್ನು ಸಮರ್ಪಿಸುವೆನು. ಆತನನ್ನು ಹಾಡುತ್ತಾ ವಾದ್ಯಬಾರಿಸುವೆನು. … “ನನ್ನ ಸಾನ್ನಿಧ್ಯಕ್ಕೆ ಬಾ” ಎಂಬ ನಿನ್ನ ಮಾತಿಗೆ, ನಾನು, “ಯೆಹೋವನೇ, ನಿನ್ನ ಸಾನ್ನಿಧ್ಯಕ್ಕೆ ಬಂದೇ ಬರುವೆನು” ಎಂದು ಉತ್ತರಕೊಟ್ಟೆನು. ನನಗೆ ವಿಮುಖನಾಗಿರಬೇಡ; ನಿನ್ನ ಸೇವಕನನ್ನು ಕೋಪದಿಂದ ತಳ್ಳಬೇಡ. ನೀನು ನನಗೆ ಸಹಾಯಕನಾಗಿಯೇ ಇದ್ದೆಯಲ್ಲವೇ; ನನ್ನನ್ನು ರಕ್ಷಿಸಿದ ದೇವರೇ, ಕೈಬಿಡಬೇಡ, ತೊರೆದುಬಿಡಬೇಡ. ತಂದೆತಾಯಿಗಳು ನನ್ನನ್ನು ತೊರೆದುಬಿಟ್ಟರೇನು; ಯೆಹೋವನು ನನ್ನನ್ನು ಸೇರಿಸಿಕೊಳ್ಳುವನು. … ಯೆಹೋವನನ್ನು ನಿರೀಕ್ಷಿಸಿಕೊಂಡಿರು, ದೃಢವಾಗಿರು; ನಿನ್ನ ಹೃದಯವು ಧೈರ್ಯದಿಂದಿರಲಿ; ಯೆಹೋವನನ್ನು ನಿರೀಕ್ಷಿಸಿಕೊಂಡೇ ಇರು.

Indian Revised Version · CC BY-SA 4.0 · Bridge Connectivity Solutions

ಕೀರ್ತನೆಗಳು *29:2-3, 7-11 (IRV)*

ಪ್ರಭಾವಸ್ವರೂಪನಾದ ದೇವರು ಗುಡುಗುತ್ತಾನೆ... ಯೆಹೋವನು ತನ್ನ ಜನರಿಗೆ ಬಲವನ್ನು ಅನುಗ್ರಹಿಸುವನು; ಆತನು ತನ್ನ ಪ್ರಜೆಗೆ ಸುಕ್ಷೇಮವನ್ನು ದಯಪಾಲಿಸುವನು

ಯೆಹೋವನ ನಾಮಕ್ಕೆ ಯೋಗ್ಯವಾದ ಘನತೆಯನ್ನು ಸಲ್ಲಿಸಿರಿ; ಪರಿಶುದ್ಧತ್ವವೆಂಬ ಭೂಷಣದೊಡನೆ ಯೆಹೋವನಿಗೆ ಅಡ್ಡಬೀಳಿರಿ. ಯೆಹೋವನ ಮಹಾಧ್ವನಿಯು ಮೇಘಮಂಡಲದಲ್ಲಿ ಕೇಳಿಸುತ್ತದೆ; ಪ್ರಭಾವಸ್ವರೂಪನಾದ ದೇವರು ಗುಡುಗುತ್ತಾನೆ; ಯೆಹೋವನು ಆಕಾಶದ ಜಲರಾಶಿಗಳ ಮೇಲೆ ಇದ್ದಾನೆ. ... ಯೆಹೋವನ ಗರ್ಜನೆಗೆ ಮಿಂಚುಗಳು ಥಳಥಳನೆ ಹೊಳೆಯುತ್ತವೆ. ಯೆಹೋವನ ಗರ್ಜನೆಗೆ ಕಾಡು ಹೊರಳಾಡುತ್ತದೆ; ಕಾದೇಶ್ ಅರಣ್ಯವು ಕಂಪಿಸುತ್ತದೆ. ಯೆಹೋವನ ಗರ್ಜನೆಯು ದೇವದಾರು ಮರಗಳನ್ನು ಕದಲಿಸುತ್ತದೆ; ಕಾಡಿನ ಮರಗಳು ಬರಿದಾಗುತ್ತವೆ. ಆಗ ಆತನ ಮಂದಿರದಲ್ಲಿರುವವರೆಲ್ಲರು, “ಎಷ್ಟೋ ಪ್ರಭಾವ!” ಎನ್ನುತ್ತಾರೆ. ಯೆಹೋವನು ಜಲಪ್ರಳಯದಲ್ಲಿ ಆಸೀನನಾಗಿರುವನು; ಆತನು ಸದಾಕಾಲವೂ ಅರಸನಾಗಿ ಕುಳಿತಿರುವನು. ಯೆಹೋವನು ತನ್ನ ಜನರಿಗೆ ಬಲವನ್ನು ಅನುಗ್ರಹಿಸುವನು; ಆತನು ತನ್ನ ಪ್ರಜೆಗೆ ಸುಕ್ಷೇಮವನ್ನು ದಯಪಾಲಿಸುವನು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಮಾರ್ಕನು *9:23-26, 29; 1:27 (IRV)*

ನಂಬುತ್ತೇನೆ, ನನಗೆ ಅಪನಂಬಿಕೆ ಇಲ್ಲದಂತೆ ಸಹಾಯಮಾಡು… ಈ ಬಗೆಯ ದೆವ್ವಗಳು ದೇವರ ಪ್ರಾರ್ಥನೆಯಿಂದಲೇ ಹೊರತು ಬೇರೆ ಯಾವ ರೀತಿಯಿಂದಲೂ ಬಿಟ್ಟು ಹೋಗುವುದಿಲ್ಲವೆಂದು

ಯೇಸು ಅವನಿಗೆ, "'ನಿನ್ನ ಕೈಯಲ್ಲಿ ಆಗುವ ಹಾಗಿದ್ದರೆ ಅನ್ನುತ್ತೀಯೋ'? ನಂಬುವವನಿಗೆ ಎಲ್ಲವೂ ಸಾಧ್ಯ!" ಎಂದು ಹೇಳಿದನು. ಕೂಡಲೆ ಆ ಹುಡುಗನ ತಂದೆಯು, "ನಂಬುತ್ತೇನೆ, ನನಗೆ ಅಪನಂಬಿಕೆ ಇಲ್ಲದಂತೆ ಸಹಾಯಮಾಡು" ಎಂದು ಕೂಗಿ ಹೇಳಿದನು. ಆಗ ಯೇಸು ಜನರ ಗುಂಪು ಓಡಿಬರುವುದನ್ನು ಕಂಡು ಆ ದೆವ್ವವನ್ನು ಗದರಿಸಿ, "ಎಲೈ, ಕಿವುಡಾದ ಮೂಗದೆವ್ವವೇ, ಇವನನ್ನು ಬಿಟ್ಟು ಹೋಗು; ಇನ್ನೆಂದಿಗೂ ಇವನೊಳಗೆ ಪ್ರವೇಶಿಸಕೂಡದೆಂದು ನಾನು ನಿನಗೆ ಅಪ್ಪಣೆಕೊಡುತ್ತೇನೆ" ಅಂದನು. ಆಗ ಅದು ಅಬ್ಬರಿಸಿ ಹುಡುಗನನ್ನು ಒದ್ದಾಡಿಸಿ ಬಿಟ್ಟುಹೋಯಿತು. … ಅದಕ್ಕೆ ಆತನು, "ಈ ಬಗೆಯ ದೆವ್ವಗಳು ದೇವರ ಪ್ರಾರ್ಥನೆಯಿಂದಲೇ ಹೊರತು ಬೇರೆ ಯಾವ ರೀತಿಯಿಂದಲೂ ಬಿಟ್ಟು ಹೋಗುವುದಿಲ್ಲವೆಂದು" ಅವರಿಗೆ ಹೇಳಿದನು. … ಜನರೆಲ್ಲರೂ ಬೆರಗಾಗಿ, "ಇದೇನು? ಅಧಿಕಾರಸಹಿತವಾದ ಹೊಸ ಬೋಧನೆ! ಈತನು ದೆವ್ವಗಳಿಗೂ ಸಹ ಆಜ್ಞಾಪಿಸುತ್ತಾನೆ, ಅವು ಈತನಿಗೆ ವಿಧೇಯವಾಗುತ್ತವೆ!" ಎಂದು ತಮ್ಮತಮ್ಮೊಳಗೆ ವಿಚಾರಮಾಡಿಕೊಂಡರು.

Indian Revised Version · CC BY-SA 4.0 · Bridge Connectivity Solutions

ಕೀರ್ತನೆಗಳು *22:1, 16-18, 26, 29, 31 (IRV)*

ಯೆಹೋವನ ಭಕ್ತರೆಲ್ಲರೂ ಆತನನ್ನು ಕೊಂಡಾಡುವರು. ಅವರ ಅಂತರಾತ್ಮವು ಯಾವಾಗಲು ಚೈತನ್ಯವುಳ್ಳದ್ದಾಗಿರಲಿ

ನನ್ನ ದೇವರೇ, ನನ್ನ ದೇವರೇ, ಏಕೆ ನನ್ನನ್ನು ಕೈಬಿಟ್ಟಿದ್ದೀ? ನೀನು ಏಕೆ ನನಗೆ ಸಹಾಯಮಾಡದೆಯೂ, ನನ್ನ ಕೂಗನ್ನು ಕೇಳದೆಯೂ ದೂರವಾಗಿದ್ದೀ? … ನಾಯಿಗಳು ನನ್ನನ್ನು ಸುತ್ತಿಕೊಂಡಿವೆ; ದುಷ್ಟರ ಗುಂಪು ನನ್ನನ್ನು ಆವರಿಸಿಕೊಂಡಿದೆ. ನನ್ನ ಕೈಕಾಲುಗಳನ್ನು ತಿವಿದಿದ್ದಾರೆ. ನನ್ನ ಎಲುಬುಗಳನ್ನೆಲ್ಲಾ ಎಣಿಸುವುದಕ್ಕಾಗುವುದು; ಅವರೋ ನನ್ನನ್ನು ನೋಡಿ ನೋಡಿ ಹಿಗ್ಗುತ್ತಾರೆ. ನನ್ನ ಮೇಲ್ಹೊದಿಕೆಯನ್ನು ತಮ್ಮಲ್ಲಿ ಪಾಲು ಮಾಡಿಕೊಳ್ಳುತ್ತಾರೆ; ನನ್ನ ಅಂಗಿಗಾಗಿ ಚೀಟುಹಾಕುತ್ತಾರೆ. … ದೀನರು ಉಂಡು ತೃಪ್ತರಾಗುವರು; ಯೆಹೋವನ ಭಕ್ತರೆಲ್ಲರೂ ಆತನನ್ನು ಕೊಂಡಾಡುವರು. ಅವರ ಅಂತರಾತ್ಮವು ಯಾವಾಗಲು ಚೈತನ್ಯವುಳ್ಳದ್ದಾಗಿರಲಿ. … ಭೂಲೋಕದಲ್ಲಿರುವ ಪುಷ್ಟರೆಲ್ಲರೂ ಆರಾಧಿಸುವರು; ತಮ್ಮ ಜೀವವನ್ನು ಉಳಿಸಿಕೊಳ್ಳಲಾರದೆ ಮಣ್ಣು ಪಾಲಾಗುವವರೆಲ್ಲರೂ ಆತನಿಗೆ ಅಡ್ಡಬೀಳುವರು. … ಅವರು ಬಂದು ಆತನ ನೀತಿಯನ್ನೂ, ಆತನು ನಡೆಸಿದ ಕಾರ್ಯಗಳನ್ನೂ ಮುಂದೆ ಹುಟ್ಟುವ ಜನಕ್ಕೆ ತಿಳಿಸುವರು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಪರಮಗೀತೆ *8:6-7; 2:15-16 (IRV)*

ನಿನ್ನ ಹೃದಯದ ಮೇಲೆ ನನ್ನನ್ನು ಧರಿಸಿಕೋ... ಪ್ರೀತಿ ಮೃತ್ಯುವಿನಷ್ಟು ಶಕ್ತಿಶಾಲಿ, ಪ್ರೀತಿದ್ರೋಹದಿಂದ ಹುಟ್ಟುವ ಮತ್ಸರವು ಪಾತಾಳದಷ್ಟು ಕ್ರೂರ

ನಿನ್ನ ಕೈಯಲ್ಲಿನ ಮುದ್ರೆಯ ಹಾಗೆ ನಿನ್ನ ಹೃದಯದ ಮೇಲೆ ನನ್ನನ್ನು ಧರಿಸಿಕೋ. ಪ್ರೀತಿ ಮೃತ್ಯುವಿನಷ್ಟು ಶಕ್ತಿಶಾಲಿ, ಪ್ರೀತಿದ್ರೋಹದಿಂದ ಹುಟ್ಟುವ ಮತ್ಸರವು ಪಾತಾಳದಷ್ಟು ಕ್ರೂರ, ಅದರ ಜ್ವಾಲೆಯು ಬೆಂಕಿಯ ಉರಿ, ಧಗಧಗಿಸುವ ಕೋಪಾಗ್ನಿ. ನಂದಿಸಲಾರವು ಪ್ರೀತಿಯನ್ನು ಜಲರಾಶಿಗಳು, ಮುಣುಗಿಸಲಾರವು ಅದನ್ನು ಪ್ರವಾಹಗಳು. ಪ್ರೀತಿಯನ್ನು ಗಳಿಸಲು ಮನೆಮಾರುಗಳನ್ನು ಮಾರಿದರೂ ಸಿಗುವುದು ಅವನಿಗೆ ತಿರಸ್ಕಾರ. ... ತೋಟಗಳನ್ನು ಹಾಳುಮಾಡುವ ನರಿಗಳನ್ನು, ನರಿಮರಿಗಳನ್ನು ಹಿಡಿಯಿರಿ; ಹೂಬಿಟ್ಟಿರುವ ನಮ್ಮ ದ್ರಾಕ್ಷಿ ತೋಟಗಳು ಹಾಳು. ಎನ್ನಿನಿಯನು ನನ್ನವನೇ, ನಾನು ಅವನವಳೇ, ನೆಲದಾವರೆಗಳ ಮಧ್ಯದಲ್ಲಿ ಮಂದೆಯನ್ನು ಮೇಯಿಸುವವನಾಗಿದ್ದಾನೆ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಪ್ರಲಾಪಗಳು *3:22-23, 25-26, 28-29, 32 (IRV)*

ಯೆಹೋವನು ತನ್ನನ್ನು ನಿರೀಕ್ಷಿಸುವವರಿಗೂ ಮತ್ತು ಹುಡುಕುವವರಿಗೂ ಮಹೋಪಕಾರಿಯಾಗಿದ್ದಾನೆ

ನಾನು ಉಳಿದಿರುವುದು ಒಡಂಬಡಿಕೆಗೆ ಬದ್ಧವಾಗಿರುವ ಆತನ ನಂಬಿಗಸ್ತಿಕೆಯಿಂದಲೇ; ಯೆಹೋವನ ಕೃಪಾವರಗಳ ಕಾರ್ಯಗಳು ನಿಂತುಹೋಗವು. ದಿನದಿನವು ಹೊಸಹೊಸದಾಗಿ ಒದಗುತ್ತವೆ; ನಿನ್ನ ನಂಬಿಗಸ್ತಿಕೆಯು ದೊಡ್ಡದು! … ಯೆಹೋವನು ತನ್ನನ್ನು ನಿರೀಕ್ಷಿಸುವವರಿಗೂ ಮತ್ತು ಹುಡುಕುವವರಿಗೂ ಮಹೋಪಕಾರಿಯಾಗಿದ್ದಾನೆ. ಯೆಹೋವನ ರಕ್ಷಣಕಾರ್ಯವನ್ನು ಎದುರುನೋಡುತ್ತಾ ಶಾಂತವಾಗಿ ಕಾದುಕೊಂಡಿರುವುದು ಒಳ್ಳೆಯದು. … ನನ್ನ ಮೇಲೆ ಇದನ್ನು ಹೊರಿಸಿದವನು ಯೆಹೋವನೇ ಎಂದು ಅವನು ಒಂಟಿಗನಾಗಿ ಕುಳಿತು ಮೌನವಾಗಿರಲಿ. ಒಂದು ವೇಳೆ ಯೆಹೋವನಿಂದ ಸುಗತಿಯಾದೀತೆಂಬ ನಿರೀಕ್ಷೆಯಿಂದ ತನ್ನ ಮುಖವನ್ನು ಕೊಳಕಿನ ಮೇಲೆ ಹಾಕಲಿ. … ಆತನು ವ್ಯಥೆಗೊಳಿಸಿದರೇನು, ತನ್ನ ಕೃಪಾತಿಶಯದಿಂದ ಕನಿಕರಿಸುವನು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಹೋಶೇಯನು *2:2, 13, 8, 14, 19-20; 6:6 (IRV)*

ವ್ಯಭಿಚಾರದ ಬೆಡಗನ್ನು ತನ್ನ ಸ್ತನಮಧ್ಯದಿಂದ ತೊಲಗಿಸಲಿ… ನೀನು ಯೆಹೋವನಾದ ನನ್ನನ್ನು ತಿಳಿದುಕೊಳ್ಳುವೆ… ನನಗೆ ಯಜ್ಞವು ಬೇಡ, ಕರುಣೆಯೇ ಬೇಕು

“ನಿಮ್ಮ ತಾಯಿಯ ಸಂಗಡ ವಾದಮಾಡಿ; ಅವಳು ನನ್ನ ಹೆಂಡತಿಯಲ್ಲ, ನಾನು ಅವಳ ಗಂಡನಲ್ಲ. ಅವಳು ವ್ಯಭಿಚಾರವನ್ನು ತನ್ನ ಮುಖಸೌಂದರ್ಯದಿಂದ, ವ್ಯಭಿಚಾರದ ಬೆಡಗನ್ನು ತನ್ನ ಸ್ತನಮಧ್ಯದಿಂದ ತೊಲಗಿಸಲಿ. … ಅವಳು ನನ್ನನ್ನು ಮರೆತು ಮೂಗುತಿ ಮೊದಲಾದ ಒಡವೆಗಳಿಂದ ತನ್ನನ್ನು ಶೃಂಗರಿಸಿಕೊಂಡು, ವ್ಯಭಿಚಾರಿಗಳ ಹಿಂದೆ ಹೋಗಿ ಬಾಳ್ ದೇವತೆಗಳ ಉತ್ಸವ ದಿನಗಳಲ್ಲಿ ಧೂಪಹಾಕಿದ್ದಕ್ಕೆ ನಾನು ಅವಳನ್ನು ದಂಡಿಸುವೆನು, ಇದು ಯೆಹೋವನ ನುಡಿ.” … ಅವಳಿಗೆ ಧಾನ್ಯ, ದ್ರಾಕ್ಷಾರಸ, ತೈಲಗಳು ನನ್ನಿಂದ ದೊರೆತವುಗಳೆಂದೂ, ಬಾಳನ ಪೂಜೆಗೆ ಉಪಯೋಗಿಸಿದ ಬೆಳ್ಳಿಬಂಗಾರಗಳು ನನ್ನ ಧಾರಾಳವಾದ ವರವೆಂದೂ ಅವಳಿಗೆ ತಿಳಿಯದು. … “ಆಹಾ, ನಾನು ಅವಳನ್ನು ಒಲಿಸಿ, ಅಡವಿಗೆ ಕರೆದುಕೊಂಡು ಹೋಗಿ, ಅವಳೊಂದಿಗೆ ಹೃದಯಂಗಮವಾಗಿ ಮಾತನಾಡುವೆನು. … ನಾನು ನಿನ್ನನ್ನು ಶಾಶ್ವತವಾಗಿ ವರಿಸುವೆನು; ಹೌದು, ನೀತಿ, ನ್ಯಾಯ, ಪ್ರೀತಿ ಮತ್ತು ದಯೆಗಳಿಂದ ನಿನ್ನನ್ನು ವರಿಸುವೆನು. ನಾನು ನಿನ್ನನ್ನು ನಂಬಿಕೆಯಿಂದ ವರಿಸಲು ನೀನು ಯೆಹೋವನಾದ ನನ್ನನ್ನು ತಿಳಿದುಕೊಳ್ಳುವೆ.” … ನನಗೆ ಯಜ್ಞವು ಬೇಡ, ಕರುಣೆಯೇ ಬೇಕು; ಹೋಮಗಳಿಗಿಂತ ದೇವಜ್ಞಾನವೇ ಇಷ್ಟ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಆಮೋಸನು 5:21-24 (IRV)

ನ್ಯಾಯವು ಹೊಳೆಯ ಹಾಗೆ ಹರಿಯಲಿ, ಧರ್ಮವು ಮಹಾನದಿಯಂತೆ ಹರಿಯಲಿ

“ನಿಮ್ಮ ಜಾತ್ರೆಗಳನ್ನು ಹಗೆಮಾಡುತ್ತೇನೆ, ತುಚ್ಛೀಕರಿಸುತ್ತೇನೆ, ನಿಮ್ಮ ಉತ್ಸವಗಳ ವಾಸನೆಯೇ ನನಗೆ ಬೇಡ. ನೀವು ನನಗೆ ಸರ್ವಾಂಗಹೋಮಗಳನ್ನು ಮತ್ತು ಧಾನ್ಯನೈವೇದ್ಯಗಳನ್ನು ಅರ್ಪಿಸಿದರೂ, ನಾನು ಅದನ್ನು ಸ್ವೀಕರಿಸುವುದಿಲ್ಲ, ಸಮಾಧಾನದ ಯಜ್ಞವಾಗಿ ನೀವು ಒಪ್ಪಿಸಿದ ಕೊಬ್ಬಿದ ಪಶುಗಳನ್ನು ನೋಡುವುದಿಲ್ಲ. ನಿಮ್ಮ ಗೀತೆಗಳ ಧ್ವನಿಯನ್ನು ನನ್ನಿಂದ ತೊಲಗಿಸಿರಿ; ನಿಮ್ಮ ವೀಣೆಗಳ ಮಧುರನಾದಕ್ಕೆ ಕಿವಿಗೊಡುವುದಿಲ್ಲ. ಅದರ ಬದಲಾಗಿ ನ್ಯಾಯವು ಹೊಳೆಯ ಹಾಗೆ ಹರಿಯಲಿ, ಧರ್ಮವು ಮಹಾನದಿಯಂತೆ ಹರಿಯಲಿ.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಚೆಫನ್ಯನು *1:14-15; 3:17 (IRV)*

ಹಾಳುಪಾಳುಮಾಡುವ ದಿನ... ನಿನ್ನ ದೇವರಾದ ಯೆಹೋವನು ನಿನ್ನ ಮಧ್ಯದಲ್ಲಿ ಶೂರನಾಗಿದ್ದಾನೆ, ನಿನ್ನನ್ನು ರಕ್ಷಿಸುವನು... ನಿನ್ನಲ್ಲಿ ಆನಂದಿಸಿ ಹರ್ಷಧ್ವನಿಗೈಯುವನು

ಯೆಹೋವನ ಮಹಾದಿನವು ಸಮೀಪಿಸಿತು, ಬಹು ತ್ವರೆಯಾಗಿ ಬರುತ್ತಿದೆ; ಆಹಾ, ಕಿವಿಗೊಡಿರಿ, ಯೆಹೋವನ ದಿನವೇ ಬಂದಿತು; ಇಗೋ, ಅಲ್ಲಿ ಒಬ್ಬ ಶೂರನು ಘೋರವಾಗಿ ಗೋಳಾಡುತ್ತಿದ್ದಾನೆ! ಆ ದಿನದ ಸುದ್ದಿ ಕಹಿಯಾದುದು, ಅದು ರೌದ್ರದ ದಿನ, ಶ್ರಮಸಂಕಟಗಳ ದಿನ, ಹಾಳುಪಾಳುಮಾಡುವ ದಿನ, ಕತ್ತಲಿನ ಮೊಬ್ಬಿನ ದಿನ, ಕಾರ್ಮುಗಿಲ ಕಗ್ಗತ್ತಲ ದಿನ! ... ನಿನ್ನ ದೇವರಾದ ಯೆಹೋವನು ನಿನ್ನ ಮಧ್ಯದಲ್ಲಿ ಶೂರನಾಗಿದ್ದಾನೆ, ನಿನ್ನನ್ನು ರಕ್ಷಿಸುವನು; ನಿನ್ನಲ್ಲಿ ಉಲ್ಲಾಸಿಸೇ ಉಲ್ಲಾಸಿಸುವನು; ತನ್ನ ಪ್ರೀತಿಯಲ್ಲಿ ನಿನ್ನ ಜೀವನವನ್ನು ನೂತನಗೊಳಿಸುವನು; ನಿನ್ನಲ್ಲಿ ಆನಂದಿಸಿ ಹರ್ಷಧ್ವನಿಗೈಯುವನು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions

ಹಬಕ್ಕೂಕನು 3:16-19 (IRV)

ಹೊಲಗದ್ದೆಗಳು ಆಹಾರ ಧಾನ್ಯಗಳನ್ನು ಉತ್ಪತ್ತಿಮಾಡದಿದ್ದರೂ... ನಾನು ಯೆಹೋವನಲ್ಲಿ ಉಲ್ಲಾಸಿಸುವೆನು, ನನ್ನ ರಕ್ಷಕನಾದ ದೇವರಲ್ಲಿ ಆನಂದಿಸುವೆನು

ಅದು ನನಗೆ ಕೇಳಿಸಲು ನನ್ನ ಒಡಲು ನಡುಗಿತು, ಆ ಶಬ್ದಕ್ಕೆ ನನ್ನ ತುಟಿಗಳು ಅದರಿದವು. ಕ್ಷಯವು ನನ್ನ ಎಲುಬುಗಳಲ್ಲಿ ಸೇರಿತು. ನಾನು ನಿಂತ ಹಾಗೆಯೇ ನಡುಗಿದೆನು. ವಿಪತ್ಕಾಲವು ನಮ್ಮನ್ನು ಹಿಂಸಿಸುವ ಜನರನ್ನು ಎದುರಾಯಿಸಿ ಅವರ ಮೇಲೆ ಬೀಳುವವರೆಗೂ ನಾನು ಅದಕ್ಕಾಗಿ ತಾಳ್ಮೆಯಿಂದ ಎದುರುನೋಡುವೆನು. ಆಹಾ, ಅಂಜೂರವು ಚಿಗುರದಿದ್ದರೂ, ದ್ರಾಕ್ಷಾಲತೆಗಳಲ್ಲಿ ಹಣ್ಣು ಸಿಕ್ಕದಿದ್ದರೂ, ಎಣ್ಣೆ ಮರಗಳ ಉತ್ಪತ್ತಿಯು ಶೂನ್ಯವಾದರೂ, ಹೊಲಗದ್ದೆಗಳು ಆಹಾರ ಧಾನ್ಯಗಳನ್ನು ಉತ್ಪತ್ತಿಮಾಡದಿದ್ದರೂ, ಕುರಿಹಟ್ಟಿಗಳು ಬರಿದಾಗಿ ಹೋದರೂ, ಕೊಟ್ಟಿಗೆಗಳಲ್ಲಿ ದನಕರುಗಳು ಇಲ್ಲವಾದರೂ, ನಾನು ಯೆಹೋವನಲ್ಲಿ ಉಲ್ಲಾಸಿಸುವೆನು, ನನ್ನ ರಕ್ಷಕನಾದ ದೇವರಲ್ಲಿ ಆನಂದಿಸುವೆನು. ನನ್ನ ಕರ್ತನಾದ ಯೆಹೋವನೇ ನನ್ನ ಬಲ; ಆತನು ನನ್ನ ಕಾಲನ್ನು ಜಿಂಕೆಯಂತೆ ಚುರುಕುಗೊಳಿಸುತ್ತಾನೆ, ನಾನು ಬೆಟ್ಟ ಗುಡ್ಡಗಳಲ್ಲಿ ಓಡಾಡುವಂತೆ ಮಾಡುತ್ತಾನೆ. ಪ್ರಧಾನ ಗಾಯಕನ ಕೀರ್ತನೆಸಂಗ್ರಹದಿಂದ ತೆಗೆದದ್ದು; ನನ್ನ ತಂತಿವಾದ್ಯದೊಡನೆ ಹಾಡತಕ್ಕದ್ದು.

Spiritual Warfare Cards.com

Indian Revised Version · CC BY-SA 4.0 · Bridge Connectivity Solutions